MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com | Yuva Marga | yuva_marga_

# ಯುವ ಮಾರ್ಗ

YUVA MARGA NEWS PAPER – VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 05 | ಸಂಚಿಕೆ: 93 | ಬುಧವಾರ : 28-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 93 | WEDNESDAY : 28-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ರಾಯಚೂರು ಉತ್ಸವದ ಸಿದ್ಧತಾ ಕಾರ್ಯ ಚುರುಕಾಗಲಿ: ನಿತೀಶ್ ಕೆ



ಯುವಮಾರ್ಗ ಸುದ್ದಿ

**ರಾಯಚೂರು,ಜ.27–** ಫೆ.5 ರಿಂದ ಮೂರು ದಿನಗಳ ಕಾಲ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವಕ್ಕೆ ಇನ್ನು ಕೆಲವೇ ದಿನಗಳು ಬಾಕಿ ಇದ್ದು ಅಧಿಕಾರಿಗಳು ಮತ್ತು ಸಿಬ್ಬಂದಿ ಚುರುಕಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹಳೆಯ ಜಿಲ್ಲಾಧಿಕಾರಿಗಳ ಆವರಣದಲ್ಲಿನ ಮಹಾನಗರ ಪಾಲಿಕೆಯ ಕೋರ್ಟ ಹಾಲನಲ್ಲಿ ಜನವರಿ 27ರಂದು ನಡೆದ ರಾಯಚೂರು ಉತ್ಸವದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಲ್ಲ ಮಂದಿರಗಳು, ಮಸೀದಿಗಳು ಹಾಗೂ ಚರ್ಚ್ ಸೇರಿದಂತೆ ಇನ್ನಿತರ ಎಲ್ಲ ದೇವಸ್ಥಾನಗಳಲ್ಲಿ ಪ್ರಾರ್ಥನಾ ಸಮಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಜನತೆಗೆ ಉತ್ಸವದ ಬಗ್ಗೆ ಮಾಹಿತಿ ಕೊಡುವ ಕಾರ್ಯವಾಗಬೇಕು. ರಾಯಚೂರು, ಮಾನವಿ, ಸಿಂಧನೂರ, ಲಿಂಗಸೂರು, ದೇವದುರ್ಗ, ಮಸ್ಕಿ, ಸಿರವಾರ ಸೇರಿದಂತೆ ಜಿಲ್ಲೆಯ ಪಟ್ಟಣ ಮತ್ತು ನಗರ ಪ್ರದೇಶಗಳಲ್ಲಿನ ಕಸ ಎತ್ತುವ ವಾಹನಗಳಲ್ಲಿ ಕಡ್ಡಾಯವಾಗಿ ಜಿಂಗಲ್ ಮೂಲಕ ಉತ್ಸವದ ಪ್ರಚಾರ ಕಾರ್ಯ ನಡೆಸಬೇಕು. ಮುಖ್ಯವಾಗಿ ತಾಲೂಕು ಪಂಚಾಯತನ ಎಲ್ಲ ಕಾರ್ಯ ನಿರ್ವಹಣಾಧಿಕಾರಿಗಳು ತಮ್ಮ ತಮ್ಮ ವ್ಯಾಪ್ತಿಯ ಎಲ್ಲ ಗ್ರಾಮ ಪಂಚಾಯತಗಳ ಪಿಡಿಓ ಅವರ ಸಭೆ ಕರೆದು ಅವರ ಮೂಲಕ ಗ್ರಾಮ ಮತ್ತು ಹೋಬಳಿ ಮಟ್ಟದಲ್ಲಿ ಸಹ ಕಸ ಎತ್ತುವ ವಾಹನಗಳು ಮತ್ತು ಡಂಗೂರದ ಮೂಲಕ ಉತ್ಸವದ ಬಗ್ಗೆ ತಿಳಿಸುವ ಕಾರ್ಯ ಮಾಡಬೇಕು. ಆಯಾ ಗ್ರಾಮಗಳಲ್ಲಿನ ಶಾಲೆಗಳ ಮುಖ್ಯ ಗುರುಗಳೊಂದಿಗೆ ಚರ್ಚಿಸಿ ಗ್ರಾಮ ಪಂಚಾಯಿತಿ ಮತ್ತು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಸಹಯೋಗದಲ್ಲಿ ಗ್ರಾಮಸ್ಥರ ಸಹಕಾರದೊಂದಿಗೆ ಗ್ರಾಮಗಳಲ್ಲಿ ಜಾಥಾ ನಡೆಸಿ ಫೆ.5 ಹಾಗೂ ಫೆ.6 ಮತ್ತು ಫೆ.7ರಂದು ರಾಯಚೂರು ಉತ್ಸವ ನಡೆಯಲಿದೆ. ಎಲ್ಲರೂ ಭಾಗಿಯಾಗಬೇಕು ಎನ್ನುವ ಸಂದೇಶ ನೀಡಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಜಂಟಿ ಸಭೆ ನಡೆಸಲು ಸೂಚನೆ:**(2ನೇ ಪುಟಕ್ಕೆ>>>)

## ಗ್ಯಾರಂಟಿ ಸರ್ಕಾರದ ವೈಫಲ್ಯಗಳ ವಿರುದ್ಧ ಸಿಡಿದೆದ್ದ ಬಿಜೆಪಿ–ಜೆಡಿಎಸ್ ಬೃಹತ್ ಪ್ರತಿಭಟನೆ

**ಬೆಂಗಳೂರು,ಜ.27–** ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಿ ರಾಜ್ಯಪಾಲರು ನಿರ್ಗಮಿಸುವ ವೇಳೆ ಅನುಚಿತವಾಗಿ ವರ್ತಿಸಿ ಅಗೌರವ ತೋರಿಸಿದ ಸದಸ್ಯರ ಅಮಾನತು, ಬಳ್ಳಾರಿ ಗಲಾಟೆ, ಅಬಕಾರಿ ಲಂಚ ಪ್ರಕರಣದಲ್ಲಿ ಸಚಿವರ ರಾಜೀನಾಮೆ, ಕುಸಿದು ಬಿದ್ದಿರುವ ಕಾನೂನು ಸುವ್ಯವಸ್ಥೆ ಸೇರಿದಂತೆ ಸರ್ಕಾರದ ವೈಫಲ್ಯಗಳನ್ನು ಖಂಡಿಸಿ ಬಿಜೆಪಿ–ಜೆಡಿಎಸ್ ದೋಸ್ತಿ ಪಕ್ಷಗಳು ಬೃಹತ್ ಪ್ರತಿಭಟನೆ ನಡೆಸಿದವು.



ವಿಧಾನಸೌಧ–ವಿಕಾಸಸೌಧದ ಮಧ್ಯಭಾಗದಲ್ಲಿರುವ ಗಾಂಧಿ ಪ್ರತಿಮೆ ಬಳಿ ನಡೆದ ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ .ವಿಜಯೇಂದ್ರ, ವಿಧಾನ ಮಂಡಲದ ಉಭಯ ಸದನಗಳ ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಪರಿಷತ್ ಸದಸ್ಯರಾದ ಬೋಜೇಗೌಡ, ಟಿ.ಎ.ಶರವಣ ಸೇರಿದಂತೆ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಒಂದು ಕಡೆ ಕಾಂಗ್ರೆಸ್, ಕೇಂದ್ರ ಸರ್ಕಾರ ಮನ್ರೆಗಾ ಯೋಜನೆ ತಿದ್ದುಪಡಿ ಮಾಡಿರುವುದನ್ನು ವಿರೋಧಿಸಿ ರಾಜಭವನ ಮುತ್ತಿಗೆ ಹಾಕಲು ಯತ್ನಿಸಿದರೆ, ಇತ್ತ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಮುಂದಿಟ್ಟುಕೊಂಡು ದೋಸ್ತಿ ಪಕ್ಷಗಳು ಬೃಹತ್ ಪ್ರತಿಭಟನೆ ನಡೆಸುವ ಮೂಲಕ ಸರ್ಕಾರಕ್ಕೆ ಬಿಸಿ ಮುಟ್ಟಿಸಿದವು.

ಪ್ರತಿಭಟನೆಯಲ್ಲಿ ಮಾತನಾಡಿದ ಬಹುತೇಕ ನಾಯಕರು ಸರ್ಕಾರದ ಭ್ರಷ್ಟಾಚಾರ, ಅಬಕಾರಿ ಇಲಾಖೆಯಲ್ಲಿ ಸಚಿವ ಆರ್.ವಿ. ತಿಮಾಪುರ ಲಂಚಕ್ಕೆ ಬೇಡಿಕೆ ಇಟ್ಟ ಪ್ರಕರಣ ಇತ್ತಿ?ಚಿಗೆ ಹೆಚ್ಚುತ್ತಿರುವ ಮಹಿಳೆಯರ ಮೇಲಿನ ದೌರ್ಜನ್ಯ ಸರ್ಕಾರಿ ಅಧಿಕಾರಿಗಳ ಮೇಲೆ ಗೂಂಡಾಗಿರಿ ಅಧಿವೇಶನದಲ್ಲಿ ರಾಜ್ಯಪಾಲರ ಜೊತೆ ಅನುಚಿತವಾಗಿ ವರ್ತಿಸಿದ ಶಾಸಕರು ಮತ್ತು ವಿಧಾನಪರಿಷತ್ ಸದಸ್ಯರನ್ನು ತಕ್ಷಣವೇ ಸದನದಿಂದ ಅನಿರ್ದಿಷ್ಟಗಳ ಕಾಲ ಅಮಾನತು ಪಡಿಸುವಂತೆ ಒತ್ತಾಯ ಮಾಡಿದರು.

ಪ್ರತಿಭಟನೆಯಲ್ಲಿ ಪಾಲ್ಗೊಂಡು(2ನೇ ಪುಟಕ್ಕೆ>)

## ರಾಯಚೂರು ಉತ್ಸವದ ಸೈಕ್ಲಾಥಾನ್

### ಉತ್ಸಾಹದಿಂದ 20 ಕಿ.ಮೀ ಸೈಕಲ್ ತುಳಿದ ಸ್ಪರ್ಧಾಳುಗಳು



ಯುವಮಾರ್ಗ ಸುದ್ದಿ



**ಅರಕೇರಾ,ಜ.27–**ರಾಯಚೂರು ಜಿಲ್ಲಾ ಉತ್ಸವದ ಕ್ಯಾಲೆಂಡರನಂತೆ ಜನವರಿ 27ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗಳ ಸಹಯೋಗದಲ್ಲಿ ಸೈಕ್ಲಾಥಾನ್ ಆಯೋಜನೆ ಮಾಡಲಾಗಿತ್ತು.

ಸೈಕಲ್ ಮ್ಯಾರಾಥಾನದಲ್ಲಿ ಭಾಗಿಯಾಗಲು ಬೆಳಗ್ಗೆ 6 ಗಂಟೆ ವೇಳೆಗೆ ನಗರದ ಮಹಾತ್ಮ ಗಾಂಧೀಜಿ ಕ್ರೀಡಾಂಗಣದತ್ತ ವೈದ್ಯರು ಸೇರಿದಂತೆ ಸೈಕಲ್ ಅಸೋಸಿಯೇಷನ್ ಸದಸ್ಯರು, ಶಾಲಾ–ಕಾಲೇಜಿನ ವಿದ್ಯಾರ್ಥಿಗಳು, ಯುವಜನರು, ನಾನಾ ಬಗೆಯ ತಮ್ಮ ತಮ್ಮ ನೆಚ್ಚಿನ ಸೈಕಲ್ ಏರಿ ಆಗಮಿಸಿ ಸ್ಪರ್ಧೆಯಲ್ಲಿ ಉತ್ಸಾಹದಿಂದ ಭಾಗಿಯಾದರು.

ಬೆಳಗ್ಗೆ, ಸೈಕಲ್ ಏರಿ ಜಿಲ್ಲಾ ಕ್ರೀಡಾಂಗಣದತ್ತ ಆಗಮಿಸಿದ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸೈಕಲ್ ತುಳಿಯುತ್ತ ಸೈಕಲ್ ಮ್ಯಾರಾಥಾನಗೆ ಹಸಿರು ನಿಶಾನೆ ತೋರಿದರು.

ಜಿಲ್ಲಾ ಕ್ರೀಡಾಂಗಣದಿಂದ ಸೈಕಲ್ ಸವಾರಿ ಆರಂಭಿಸಿದ ಸ್ಪರ್ಧಾಳುಗಳು ಬಸವೇಶ್ವರ ವೃತ್ತ, ಜಿಲ್ಲಾ ಪಂಚಾಯತ್, ಕನಕದಾಸ ವೃತ್ತ, ಎಸ್ಪಿ ಕಚೇರಿ ಮಾರ್ಗವಾಗಿ ಯರಮರಸ್, ಬೈಪಾಸ್ ಮೂಲಕ ಯಕ್ಲಾಸಪೂರ್, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಮಾರ್ಗವಾಗಿ ಮರಳಿ ಜಿಲ್ಲಾ ಕ್ರೀಡಾಂಗಣಕ್ಕೆ ಬಂದು ಸೇರಿದರು.

ಸೈಕಲ್ ಸವಾರರ ಸುರಕ್ಷತೆ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯಿಂದ ಎಲ್ಲ ರೀತಿಯ ಸುರಕ್ಷತಾ ಕ್ರಮ ವಹಿಸಲಾಗಿತ್ತು. ಸೈಕಲ್ ಸವಾರರ ಮುಂದೆ ಪೊಲೀಸ್ ಕಾನ್ವೆಗೆ ವ್ಯವಸ್ಥೆ ಮಾಡಲಾಗಿತ್ತು.

ಈ ಸ್ಪರ್ಧೆಯಲ್ಲಿ ಬೆಲಂ ಪ್ರಕಾಶ್ ಅವರು ಪ್ರಥಮ ಬಹುಮಾನ, ರಾಘವೇಂದ್ರ ಗುಪ್ತ ದ್ವಿತೀಯ ಬಹುಮಾನ ಮತ್ತು (2ನೇ ಪುಟಕ್ಕೆ>>>)

## ಲಿಂಗಸೂಗೂರು : ಬೀದಿ ಬದಿ ವ್ಯಾಪಾರಸ್ಥರ ತೆರವು ವಿರೋಧಿಸಿ ಪ್ರತಿಭಟನೆ

### ತಾತ್ಕಾಲಿಕವಾಗಿ ತೆರವು ನಿಲ್ಲಿಸುವ ಭರವಸೆ ನೀಡಿದ ಪುರಸಭೆ ಮುಖ್ಯಾಧಿಕಾರಿ



ಯುವಮಾರ್ಗ ಸುದ್ದಿ

**ಲಿಂಗಸೂಗೂರು,ಜ.27–** ಕುಟುಂಬದ ನಿರ್ವಹಣೆ ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕೆ ಆಸರೆಯಾಗಿರುವ ಬೀದಿ ಬದಿ ವ್ಯಾಪಾರವನ್ನು ಏಕಾಏಕಿ ತೆರವುಗೊಳಿಸುವ ಕ್ರಮವನ್ನು ವಿರೋಧಿಸಿ ಲಿಂಗಸೂಗೂರಿನ ಬೀದಿ ಬದಿ ವ್ಯಾಪಾರಸ್ಥರು ಸೋಮವಾರ ಪ್ರತಿಭಟನೆ ನಡೆಸಿದರು.

ಪಟ್ಟಣದ ಬಸ್ ನಿಲ್ದಾಣದಿಂದ ಪುರಸಭೆ ಕಚೇರಿ ಹಾಗೂ ಸಹಾಯಕ ಆಯುಕ್ತರ ಕಾರ್ಯಾಲಯದವರೆಗೆ ಜಾಥ ನಡೆಸಿದ ಪ್ರತಿಭಟನಕಾರರು, ಹಲವು ವರ್ಷಗಳಿಂದ ತಳ್ಳುಬಂಡಿಗಳ ಮೂಲಕ ಸಣ್ಣಪುಟ್ಟ ವ್ಯಾಪಾರ ನಡೆಸಿಕೊಂಡು ಕುಟುಂಬ ಪೋಷಿಸುತ್ತಿದ್ದೇವೆ. ಆದರೆ ಪುರಸಭೆ ಅಧಿಕಾರಿಗಳು ಏಕಾಏಕಿ ಜಾಗ ಖಾಲಿ ಮಾಡುವಂತೆ ಸೂಚನೆ ನೀಡಿರುವುದು ನಮ್ಮ ಬದುಕಿಗೆ ಧಕ್ಕೆ ತಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪುರಸಭೆಯೇ ಪಿಎಂ ಸ್ವಾನಿಧಿ ಯೋಜನೆಯಡಿ ಸಾಲ ನೀಡಿದ್ದು, (2ನೇ ಪುಟಕ್ಕೆ>>>)

## ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಪಕ್ಷವನ್ನು ಗೆಲ್ಲಿಸಿ ಇತಿಹಾಸವನ್ನು ಸೃಷ್ಟಿಸುವುದಕ್ಕೆ ಇಂದಿನಿಂದಲ್ಲೇ ಸಿದ್ಧತೆ:ಬಿ.ವಿನಾಯಕ

ಯುವಮಾರ್ಗ ಸುದ್ದಿ



**ಮಾನ್ವಿ,ಜ.27–** ಪಟ್ಟಣದ ಭಾರತೀಯ ಜನತಾ ಪಕ್ಷ ಮಾನ್ವಿ ಮಂಡಲ ಕಚೇರಿಯ ಆವರಣದಲ್ಲಿ ನಡೆದ ಮಾನ್ವಿ ಮತ್ತು ಸಿರವಾರ ಮಂಡಲ ಬಿ.ಎಲ್.ಎ.–2 ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಒಂದು ದಿನದ ಕಾರ್ಯಾಗಾರವನ್ನು ಮಾಜಿ ಸಂಸದರಾದ ಬಿ.ವಿ.ನಾಯಕ ಉದ್ಘಾಟಿಸಿ ಮಾತನಾಡಿ ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ ಬಹಳಷ್ಟು ಸಲಾ ಕೇಲವೆ ಮತಗಳ ಅಂತರದಲ್ಲಿ ಗೇಲವು ಸಾಧಿಸಿದ ಉದಾಹರಣೆಗಳಿವೇ ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ 5ರಿಂದ 6 ಸಾವಿರ ಮತಗಳ ಅಂತರದಿಂದ ಸೋಲನ್ನು ಕಾಣಬೇಕಾಯಿತು. ನಮ್ಮ ಕ್ಷೇತ್ರದಲ್ಲಿ ಗ್ರಾಮೀಣ ಭಾಗ ಮತ್ತು ನಗರ ಪ್ರದೇಶ ಎರಡು ಕಡೆಗಳಲ್ಲಿ ಮತದಾರರ ಪಟ್ಟಿಯಲ್ಲಿ ಹೇಸರುಗಳಿರುವವರ ಸಂಖ್ಯೆ ಅಂದಾಜು 15 ಸಾವಿರ ಮತಗಳು ಇರುವುದು ಕಂಡು ಬಂದಿರುವುದರಿಂದ ರಾಜ್ಯಧ್ಯಕ್ಷರಾದ ಬಿ.ವೈ.ವಿಜಯೇಂದ್ರರವರು ಈ ವಿಷಯವನ್ನು ಗಂಭಿರವಾಗಿ ಪರಿಗಣಿಸಿದ್ದು ಎಸ್.ಐ.ಆರ್ ವಿಶೇಷ ಪತಪಟ್ಟಿ ಪರಿಷ್ಕರಣೆ ಮಾಡುವ ಸಮಯದಲ್ಲಿ ಅಧಿಕಾರಿಗಳು ಸಮೀಕ್ಷೆಯನ್ನು ಸರಿಯಾಗಿ ಮಾಡುತ್ತಾರೆಯೆ ಎಂದು ಪರಿಶೀಲಿಸಿ ಮನೆ ಮನೆ ಸಮೀಕ್ಷೆ ನಡೆಸುವ ಸಮಯದಲ್ಲಿ ಜೊತೆಯಲ್ಲಿ ಇದ್ದು ಅರ್ಹ ಮತದಾರರು ಮತ ಪಟ್ಟಿಯಿಂದ ಹೊರಗುಳಿಯದಂತೆ ಹಾಗೂ ಅನರ್ಹ ಮತದಾರರು ಮತಪಟ್ಟಿಯಲ್ಲಿ ಉಳಿಯದಂತೆ ನೋಡಿಕೊಳ್ಳುವುದಕ್ಕೆ ಮಾಜಿ ಶಾಸಕರನ್ನೆ (2ನೇ ಪುಟಕ್ಕೆ>>>)

## ದೇವದುರ್ಗ ಬಣಜಿಗ ಕ್ಷೇಮಾಭಿವೃದ್ಧಿ ಸಂಘಕ್ಕೆ ನೂತನ ಪಧಾಧಿಕಾರಿಗಳ ಆಯ್ಕೆ

ಯುವಮಾರ್ಗ ಸುದ್ದಿ





**ಅರಕೇರಾ,ಜ.27–** 25 ಜನವರಿ 2026 ರಂದು ಪಟ್ಟಣದ ಖೇಣೇದ್ ಫಂಕ್ಷನ್ ಹಾಲಲ್ಲಿ ನಡೆದ ದೇವದುರ್ಗ ತಾಲೂಕು ಬಣಜಿಗ ಸಮಾಜ ಕ್ಷೇಮಾಭಿವೃದ್ಧಿ ಸಂಘಕ್ಕೆ ನೂತನ ಪಧಾಧಿಕಾರಿಗಳ ಪುನಾರಚನೆ ಮಾಡಿ ಆಯ್ಕೆ ಮಾಡಲಾಯಿತು. ಗೌರವಾಧ್ಯಕ್ಷರಾಗಿ ಪ್ರಕಾಶ ಖೇಣೇದ್, ಅಧ್ಯಕ್ಷರಾಗಿ ಮಲ್ಲಿಕಾರ್ಜುನ ಪಾಟೀಲ್ ಅಮರಾಪುರ, ಉಪಾಧ್ಯಕ್ಷರಾಗಿ ಶರಣಗೌಡ ಮಾ. ಪಾ. ಬಿ. ಗಣೇಕಲ್, ವಿರೂಪಾಕ್ಷಪ್ಪ ಸಾಹುಕಾರ ಬಳೆ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಚಂದ್ರಶೇಖರ ವಿಭೂತಿ ವಕೀಲರು ಇವರನ್ನು ದೇವದುರ್ಗ ತಾಲೂಕು ಸರ್ವ ಬಣಜಿಗ ಸಮಾಜದ ಸದಸ್ಯರು ಸೇರಿ ಆಯ್ಕೆ ಮಾಡಲಾಯಿತು, ಸಮಾಜದ ಸಂಘಟನೆ ಹಾಗೂ ಧ್ವನಿಯಾಗಿ ಕೆಲಸ ಮಾಡಲು ನೂತನ ಅಧ್ಯಕ್ಷರಿಗೆ ಶುಭ ಕೋರಿ ತಿಳಿಸಲಾಯಿತು,, ವಿಶೇಷ ಅತಿಥಿಯಾಗಿ ಸಿದ್ರಾಮಪ್ಪ ಕಾಡ್ಲೂರು ರಾಜ್ಯ ಬಣಜಿಗ ಸಮಾಜದ ಕಾರ್ಯಕಾರಿ ಸಮಿತಿ ಸದಸ್ಯರು ಭಾಗವಹಿಸಿದ್ದರು,

ಸಭೆಯಲ್ಲಿ ಬಸವರಾಜಪ್ಪ ವಾರದ, ಬಸವರಾಜಪ್ಪ ಅಮರಾಪುರ,, ಶಿವರಾಜಪ್ಪ ಚಿಕ್ಕಬುದೂರು,, ಶರಣಪ್ಪ ಪಡಶೆಟ್ಟಿ, ಶಶಿಕಾಂತ ಜಾಲಹಳ್ಳಿ ಶರಣು ರಾಮದುರ್ಗ, ಶರಣು ಕೋರಿ, ರಾಜಪ್ಪ ಕೋರಿ, ಬಸವರಾಜ್ ಯಾಟಗಲ್, ಶಿವಕುಮಾರ್ ಹರವಿ , ಬಣಜಿಗ ಸಮಾಜದ ಗಣ್ಯರು ಹಿರಿಯರು ಯುವಕರು ಉಪಸ್ಥಿತರಿದ್ದರು.

## ಗೆಜ್ಜೆ ಭಾವಿ.77ನೇ ಗಣರಾಜ್ಯೋತ್ಸವ ಶಾಲಾಮಕ್ಕಳಿಗೆ ವಿವಿಧ ಸ್ಪರ್ಧೆ ಯುವ ಟೀಮ್ ಕಾರ್ಯಕ್ರಮ ಶ್ಲಾಘನೀಯ ರಡ್ಡೆಪ್ಪ ಭೋವಿ

ಯುವಮಾರ್ಗ ಸುದ್ದಿ



**ಅರಕೇರಾ,ಜ.27–**ತಾಲೂಕಿನ ಗೆಜ್ಜೆ ಭಾವಿ ಗ್ರಾಮದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಯಲ್ಲಿ 77 ನೇ ಗಣರಾಜ್ಯೋತ್ಸವ ಕಾರ್ಯಕ್ರಮ ಜರುಗಿತು.

ಯುವ ಟೀಮವತಿಯಿಂದ ಗಣರಾಜ್ಯೋತ್ಸವ ಅಂಗವಾಗಿ ಶಾಲಾಮಕ್ಕಳಿಗೆ ಆಟೋಟ ಸ್ಪರ್ಧೆಗಳು. ಚಿತ್ರಕಲಾ ಸ್ಪರ್ಧೆ.ಬಾಷಣಸ್ಪರ್ದೆ. ರಸಪ್ರಶ್ನೆಗ`ಳನ್ನು ಏರ್ಪಡಿಸಿದ್ದರು. ವಿಜೆತರಾದ ಮಕ್ಕಳಿಗೆ ಬಹುಮಾನವನ್ನು ನೋಟಬುಕ್.ಪೇನ್ನು.ಬಾಗ್ಯ ವಿತರಿಸಲಾಯಿತು . ಕಾರ್ಯಕ್ರಮದಲ್ಲಿ ರೆಡ್ಡೆಪ್ಪ ಭೊವಿಗ್ರಾಮಪಂಚಾಯತ್ ಸದಸ್ಯರು ಮಾತನಾಡಿ ಯುವ ಟೀಮನವರು ಶಾಲಾಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿ ಮಕ್ಕಳಿಗೆ ಸ್ಪೂರ್ತಿ ತುಂಬಿದ್ದಾರೆ.ಅಲ್ಲದೇ ಮಕ್ಕಳ ಶೈಕ್ಷಣಿಕವಾಗಿ ಮುಂದೆ ಬರಲು ಸಹಕಾರಿಯಾಗಿದೆ ಎಂದರು.ಕಾರ್ಯಕ್ರಮದ ಅಧ್ಯಕ್ಷರಾದ ಸಿದ್ದನಗೌಡ ಮುಖ್ಯಗುರು ವಹಿಸಿದ್ದರು. ಸಂದರ್ಭದಲ್ಲಿ ಮುಸ್ಟೂರು ಗ್ರಾಮಪಂಚಾಯತ್ ಮಾಜಿ ಗ್ರಾಮಪಂಚಾಯತ್ ಅಧ್ಯಕ್ಷರಾದ ತೇಜರಾಜನಾಯಕ .ಎಸ್ ಡಿ ಎಂ ಸಿ ಅಧ್ಯಕ್ಷರಾದ ಚನ್ನಪ್ಪ ದೊರೆ. ಎಸ್ ಡಿ ಎಂ ಸಿ ಸರ್ವಸದಸ್ಯರು.ಯುವಟೀಮಬಳಗದವರು ಗ್ರಾಮದ ಯುವಕರು ಮತ್ತು ಶಿಕ್ಷಕರು ಗ್ರಾಮಸ್ಥರು ಭಾಗವಹಿಸಿದ್ದರು

ಯುವ ಮಾರ್ಗ www.yuvamarga.com Yuva Marga yuva_marga_

## ಮೊದಲನೇಯ ಪುಟದಿಂದ

# ರಾಯಚೂರು ಉತ್ಸವದ ಸಿದ್ಧತಾ ಕಾರ್ಯ ಚುರುಕಾಗಲಿ: ನಿತೀಶ್ ಕೆ

ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಪ್ರತಿ ಗ್ರಾಮಗಳಲ್ಲಿ ಪ್ರತಿ ಮನೆಮನೆ ತೆರಳಿ ರಾಯಚೂರು ಉತ್ಸವದ ಬಗ್ಗೆ ಜನತೆಗೆ ತಿಳಿಸುವ ಕಾರ್ಯ ಮಾಡಬೇಕು. ಈ ನಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಆರೋಗ್ಯ ಇಲಾಖೆಯ ಅಧಿಕಾರಿಗಳು ಸೇರಿ ತಮ್ಮ ಹಂತದಲ್ಲಿ ಜಂಟಿ ಸಭೆ ಅಥವಾ ವಿಡಿಯೋ ಕಾನ್ಫರೆನ್ಸ್ ನಡೆಸಿ ಉತ್ಸವದ ಪ್ರಚಾರ ಕಾರ್ಯದ ಜವಾಬ್ದಾರಿಯನ್ನು ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರಿಗೆ ವಹಿಸಿ ಮೇಲ್ವಿಚಾರಣೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

**ಆಟೋ ಪ್ರಚಾರ ತುರ್ತು ಆರಂಭವಾಗಲಿ:** ಜಿಲ್ಲೆಯಲ್ಲಿನ ಎಲ್ಲಾ ನಗರ, ಪಟ್ಟಣ ಪ್ರದೇಶ ಮತ್ತು ಹೋಬಳಿಗಳಲ್ಲಿ ಆಟೋ ಮೂಲಕ ಪ್ರಚಾರ ಕಾರ್ಯವು ಕೂಡಲೇ ಆರಂಭವಾಗಲಿ ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಬಸ್ಸುಗಳಿಗೆ ಪೋಸ್ಟರ್ ಅಂಟಿಸಿ: ಉತ್ಸವಕ್ಕೆ ಕೆಲವೇ ದಿನಗಳು ಬಾಕಿ ಇದೆ. ಹೀಗಾಗಿ ಪ್ರಚಾರ ಕಾರ್ಯ ಚುರುಕುಗೊಳಿಸಬೇಕು. ನಗರದಲ್ಲಿ ಸಂಚರಿಸುವ ಹಾಗೂ ಬೇರೆಡೆ ಸಂಚರಿಸುವ ಎಲ್ಲ ಬಸ್ಸುಗಳಿಗೆ ಪೋಸ್ಟರ್ ಅಂಟಿಸಿ ಪ್ರಚಾರ ಕಾರ್ಯ ನಡೆಸಬೇಕು ಎಂದು ಸೂಚನೆ ನೀಡಿದರು.

**ವಿವಿಧೆಡೆ ಪ್ರಚಾರ ನಡೆಸಿ:** ಪ್ರತಿ ನಿತ್ಯ ಸಾವಿರಾರು ಸಂಖ್ಯೆಯಲ್ಲಿ ಸಂಚರಿಸುವ ಪ್ರಯಾಣಿಕರಿಗೆ ಸಂದೇಶ ಹೋಗುವ ನಿಟ್ಟಿನಲ್ಲಿ ನಗರದ ರೈಲ್ವೆ ನಿಲ್ದಾಣ ಸೇರಿದಂತೆ ವಿವಿಧೆಡೆ ಬ್ಯಾನರ್ ಅಂಟಿಸಿ ಪ್ರಚಾರ ನಡೆಸಬೇಕು. ಫೆ.5 ರಿಂದ ಫೆ.7ರವರೆಗೆ ಯಾವ ಕಾರ್ಯಕ್ರಮಗಳು ಯಾವ ಸಮಯಕ್ಕೆ ನಡೆಯುತ್ತವೆ ಎಲ್ಲಿ ನಡೆಯುತ್ತವೆ ಎಂಬುದರ ಬಗ್ಗೆ ಪಟ್ಟಿ ಮಾಡಿ ಬ್ಯಾನರ್ ಅಳವಡಿಸಿ ಸಾರ್ವಜನಿಕರಿಗೆ ಮಾಹಿತಿ ನೀಡಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಡಿಡಿಪಿಐ, ಡಿಡಿಪಿಯುಗೆ ಸೂಚನೆ: ಮುಖ್ಯವಾಗಿ ಎಲ್ಲ ಶಾಲೆಗಳ ಮತ್ತು ಕಾಲೇಜುಗಳ ವಿದ್ಯಾರ್ಥಿಗಳಿಗೆ ಉತ್ಸವದ ಬಗ್ಗೆ ವ್ಯಾಪಕವಾಗಿ ಪ್ರಚಾರ ಹೋಗುವ ದಿಶೆಯಲ್ಲಿ ಡಿಡಿಪಿಐ ಮತ್ತು ಡಿಡಿಪಿಐ ಇಲಾಖೆಗಳ
ಅಧಿಕಾರಿಗಳು ಚುರುಕಾಗಿ ಕಾರ್ಯನಿರ್ವಹಿಸಬೇಕು. ಈ ಬಗ್ಗೆ ಎಲ್ಲ ಶಾಲಾ ಕಾಲೇಜುಗಳಿಗೆ ಸುತ್ತೋಲೆ ಮೂಲಕ ಮಾಹಿತಿ ಕಳುಹಿಸಲು ಕೂಡಲೇ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

**ವೆಬ್‌ಸೈಟ್ ವೀಕ್ಷಣೆ:** ರಾಯಚೂರು ಉತ್ಸವ ನಿಮಿತ್ತ ಸಿದ್ಧಪಡಿಸಿದ ವೆಬ್‌ಸೈಟ್, ಇನ್‌ಸ್ಟಾಗ್ರಾಂ, ಪೇಸ್‌ಬುಕ್, ಎನ್‌ಐಸಿ ಪೇಜ್ ಸೇರಿದಂತೆ ನಾನಾ ವೆಬ್‌ತಾಣಗಳನ್ನು ಜಿಲ್ಲಾಧಿಕಾರಿಗಳು ವೀಕ್ಷಣೆ ಮಾಡಿದರು. ಎಲ್ಲ ವೆಬ್‌ತಾಣಗಳು ಪ್ರತಿ ದಿನ ಅಪಡೇಟ್ ಆಗಬೇಕು. ಉತ್ಸವದ ಕಾರ್ಯಕ್ರಮಗಳ ಕುರಿತಂತೆ ಜನತೆಗೆ ಸ್ಪಷ್ಟ ಹಾಗು ನಿಖರವಾದ ಮಾಹಿತಿ ಒದಗಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ್ ಕಾಂದೂ, ಮಹಾನಗರ ಪಾಲಿಕೆಯು ಆಯುಕ್ತರಾದ ಜುಬಿನ್ ಮೋಹಪಾತ್ರ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಈರಣ್ಣ ಬಿರಾದಾರ, ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ ಸೇರಿದಂತೆ ವಿವಿಧ ಸಮಿತಿಗಳ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳು ಇದ್ದರು.

# ಗ್ಯಾರಂಟಿ ಸರ್ಕಾರದ ವೈಫಲ್ಯಗಳ ವಿರುದ್ಧ ಸಿಡಿದೆದ್ದ ಬಿಜೆಪಿ–ಜೆಡಿಎಸ್ ಬೃಹತ್ ಪ್ರತಿಭಟನೆ

ಮಾತನಾಡಿದ ಬಿಜೆಪಿ ರಾಜ್ಯಧ್ಯಕ್ಷ ಬಿ.ವೈ.ವಿಜಯೇಂದ್ರ, ರಾಜ್ಯ ಸರ್ಕಾರ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಜೀತದಾಳು ರೀತಿ ರೆಡ್ಡಿಯವರು ನಡೆಸಿಕೊಳ್ಳುತ್ತಾರೆ. ಕಾಂಗ್ರೆಸ್ ಪಕ್ಷದವರು ಮಾನ ಮರ್ಯಾದೆ ಬಿಟ್ಟು ಲೋಕಭವನಕ್ಕೆ ಮುತ್ತಿಗೆ ಹಾಕಲು ಮುಂದಾಗಿದ್ದಾರೆ. ಯಾವ ನೈತಿಕತೆ ಮೇಲೆ ಮುತ್ತಿಗೆ ಹಾಕುತ್ತಿದ್ದೀರಿ? ಎಂದು ಪ್ರಶ್ನೆ ಮಾಡಿದರು.

ರಾಜ್ಯಪಾಲರು ಕಾರ್ಯಂಗದ ಮುಖ್ಯಸ್ಥರು ಅವರು ಹೇಗೆ ನಡೆದುಕೊಳ್ಳಬೇಕು? ಹೇಗೆ ಕಾರ್ಯ ನಿರ್ವಹಿಸಬೇಕು? ಎಂಬುದು ಅವರಿಗೆ ಗೊತ್ತಿದೆ ನೀವು ಹೇಳಿದಂತೆ ಕೇಳಲು ಸಾಧ್ಯವಿಲ್ಲ. ರಾಜ್ಯಪಾಲರು ತಮ ವಿವೇಚನೆ ಬಳಸಿಕೊಂಡು ಸಂವಿಧಾನಬದ್ಧವಾಗಿ ಕರ್ತವ್ಯ ನಿರ್ವಹಿಸುತ್ತಾರೆ. ನಿಮ ತಾಳಕ್ಕೆ ತಕ್ಕಂತೆ ಕುಣಿಯದಿದ್ದರೆ ರಾಜ್ಯಪಾಲರೇ ಸರಿ ಇಲ್ಲ ಎಂದು ಹೇಳುವುದು ಎಷ್ಟರ ಮಟ್ಟಿಗೆ ಸರಿ ? ಎಂದು ತರಾಟೆಗೆ ತೆಗೆದುಕೊಂಡರು.

ಗ್ರಾಮೀಣ ಭಾಗದಲ್ಲಿ ಸರ್ಕಾರವೇ ಜನರಿಗೆ ಹೆಂಡ ಕುಡಿಸುವ ಕೆಲಸವನ್ನು ಮಾಡುತ್ತಿದೆ ಅನೇಕ ಕಡೆ ಮದ್ಯವನ್ನು ಎಗ್ಗಿಲ್ಲದೆ ಮಾರಾಟ ಮಾಡುತ್ತಿದ್ದಾರೆ. ಅಧಿಕಾರಿಗಳಿಗೆ ಟಾರ್ಗೆಟ್ ನೀಡಿರುವುದರಿಂದ ಯಥೇಚ್ಛವಾಗಿ ಅಕ್ರಮವಾಗಿ ಮಾರಾಟಕ್ಕೆ ಅನುವು ಮಾಡಿಕೊಂಡಿದ್ದಾರೆ. ಸಿಎಂ ಸಿದ್ದರಾಮಯ್ಯನವರಿಗೆ ಇದು ಗೊತ್ತಿಲ್ಲವೇ ? ಎಂದು ಪ್ರಶ್ನಿಸಿದರು.

ಅಬಕಾರಿ ಇಲಾಖೆಯಲ್ಲಿ ಅಧಿಕಾರಿಗಳು ಕೋಟಿ ಕೋಟಿ ಕೊಟ್ಟು ಪೋಸ್ಟಿಂಗ್ ಮಾಡಿಸಿಕೊಳ್ಳಬೇಕಾದ ವಾತಾವರಣವಿದೆ. ಲಂಚವಿಲ್ಲದೆ ಅಲ್ಲಿ ಏನು ನಡೆಯುವುದಿಲ್ಲ. ಎಲ್ಲವೂ ಸಚಿವರ ಮೂಗಿನ ನೇರಕ್ಕೆ ನಡೆಯುತ್ತದೆ. ಸಾರ್ವಜನಿಕ ಜೀವನದಲ್ಲಿರುವ ನಿಮಗೆ ಘನತೆ ಗೌರವ ಇದ್ದಿದ್ದರೆ ಇಷ್ಟೊತ್ತಿಗೆ ನಿಮ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಗೌರವಿತವಾಗಿ ನಿರ್ಗಮಿಸಬೇಕಿತ್ತು. ಬದಲಿಗೆ ಅವರ ಕಾಲದಲ್ಲಿ ಹಾಗಿತ್ತು, ನಮ ಕಾಲದಲ್ಲಿ ಹೀಗಿದೆ ಎಂದು ಇಲ್ಲದ ಕಾರಣಗಳನ್ನು ಹೇಳುತ್ತಿದ್ದಾರೆ. ಅವರ ರಾಜೀನಾಮೆ ಪಡೆಯುವವರೆಗೂ ನಮ ಹೋರಾಟ ನಿಲ್ಲುವುದಿಲ್ಲ ಎಂದು ಎಚ್ಚರಿಸಿದರು.

ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ವೈನ್ ಸ್ಟೋ?ರ್, ಬಾರ್‌ಗಳಲ್ಲಿ ಮಂತ್ಲಿ ಫಿಕ್ಸ್‌ಆಗಿದೆ. ಅಬಕಾರಿ ಇಲಾಖೆಯ ಅಕ್ರಮದಲ್ಲಿ ಸಿಎಂಗೂ ಪಾಲು ಇದೆ. ಇಲ್ಲದಿದ್ದಿದ್ದರೆ ಅವರು ಸಚಿವರ ರಾಜೀನಾಮೆ ಪಡೆಯುತ್ತಿದ್ದರು. ಸಿಎಂಗೆ ಅಬಕಾರಿ ಅಕ್ರಮ ಕಾಣುತ್ತಿಲ್ಲವೇ? ಎಂದು ಪ್ರಶ್ನಿಸಿದರು.

ಸಿಎಂ ಧೃತರಾಷ್ಟ್ರನ ಹಾಗೆ ಕಣುಚ್ಚಿ ಕೂತಿದ್ದಾರಾ? ಪಂಚ ರಾಜ್ಯಗಳಿಗೆ ಹಣ ಹೋಗುತ್ತಿದೆ. ಹೀಗಾಗಿ ಸಿಎಂ ತಮಗೆ ಏನೂ ಗೊತ್ತಿಲ್ಲ ಎಂದು ಸುಮನಿದ್ದಾರೆ. ದೊಡ್ಡ ಭ್ರಷ್ಟಾಚಾರ ಆಗುತ್ತಿದೆ, ಮಂತ್ರಿಗಳ ರಾಜೀನಾಮೆ ಆಗಲೇಬೇಕು ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಸರ್ಕಾರಕ್ಕೆ ಜವಾಬ್ದಾರಿ ಇಲ್ಲ. ಜನರನ್ನು ದಾರಿ ತಪ್ಪಿಸಲು ಈ ಪ್ರತಿಭಟನೆ ನಡೆಸುತ್ತಿದ್ದಾರೆ. ಇದು ಭ್ರಷ್ಟಾಚಾರದ ಸರ್ಕಾರ. ಭ್ರಷ್ಟಾಚಾರ, ಕುರ್ಚಿ ಕಲಹ ವಿಷಯಾಂತರ ಮಾಡಲು ಅವರು ಪ್ರತಿಭಟನೆ ನಡೆಸುತ್ತಿದ್ದಾರೆ. ಆಡಳಿತ ಪಕ್ಷವಾಗಿ ಅವರೇ ಪ್ರತಿಭಟನೆ ಮಾಡುವುದು ನಾಚಿಕೆಗೇಡು ಎಂದು ವಾಗ್ದಾಳಿ ನಡೆಸಿದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶಬಾಬು ಮಾತನಾಡಿ, ಈ ಸರ್ಕಾರ ಎಲ್ಲ ರೀತಿಯಲ್ಲಿ ಭ್ರಷ್ಟ ಹಾಗೂ ಲೂಟಿ ಮಾಡುತ್ತಿದೆ. ಇದೇ ಕರ್ತವ್ಯ ಆಗಿದೆ. ಸಾರ್ವಜನಿಕರಂತೂ ಬೇಸತ್ತು ಹೋಗಿದ್ದಾರೆ. ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ ಮಾಡಿದ್ದಾರೆ. ಜನರ ಬಳಿ ತೆರಿಗೆ ವಸೂಲಿ ಮಾಡಿ ಬೆಲೆ ಏರಿಕೆ ಮಾಡುತ್ತಿದ್ದಾರೆ. 6 ಸಾವಿರ ಕೋಟಿ ಲೂಟಿ ಮಾಡಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರಿಗೆ ನೈತಿಕತೆ ಇದೆಯೇ? ಲೂಟಿ ಮಾಡಿದ ಸಚಿವರನ್ನು ಇಟ್ಟುಕೊಂಡು ಕೆಲಸ ಮಾಡಿಸುತ್ತಿದ್ದೀರಾ? ಅಧಿಕಾರಿಗಳನ್ನು ದುರುಪಯೋಗ ಪಡಿಸಿಕೊಳ್ಳುತ್ತಿದ್ದೀರಾ ಎಂದು ಪ್ರಶ್ನಿಸಿದರು.

ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಡಾ.ಸಿ.ಎನ್ ಆಶ್ವತ್ ನಾರಾಯಣ ಮಾತನಾಡಿ, ಕಾಂಗ್ರೆಸ್‌ನದು ಗೂಂಡಾಗಿರಿ ಸಂಸ್ಕೃತಿ. ಭ್ರಷ್ಟಾಚಾರ ಸರ್ಕಾರದಲ್ಲಿ ಹೆಚ್ಚಾಗಿದೆ. ಅಬಕಾರಿ ಭ್ರಷ್ಟಾಚಾರ ಮಿತಿಮೀರಿದೆ. ಅಬಕಾರಿ ಸಚಿವರ ವಿರುದ್ಧ ಸಾಕ್ಷಿ ಸಿಕ್ಕಿದೆ. ಅವರು ಆರೋಪ ನಿರಾಕರಿಸಿದರೂ ದಾಖಲೆ ಇವೆಯಲ್ಲ.ಸಚಿವರು ಪ್ರಜಾಪ್ರಭುತ್ವ ವಿರೋಧಿಯಾಗಿ ನಡೆದುಕೊಳ್ಳುತ್ತಿರುವುದು ದುರಂತ ಎಂದು ಬೇಸರ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಶಾಸಕರಾದ ಸುರೇಶ್‌ಕುಮಾರ್, ಜನಾರ್ದನರೆಡ್ಡಿ, ವಿಧಾನಸಭೆಯ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ್, ಎನ್.ರವಿಕುಮಾರ್, ಎಸ್.ರಘು, ಭರತ್‌ಶೆಟ್ಟಿ, ಅರಗ ಜ್ಞಾನೇಂದ್ರ, ಕೆ.ಗೋಪಾಲಯ್ಯ, ಬಿ.ಪಿ.ಹರೀಶ್, ಮುನಿರಾಜು, ವಿಧಾನಪರಿಷತ್ ಸದಸ್ಯರಾದ ಹೇಮಲತಾ ನಾಯಕ್, ಹನುಮಂತ್ ನಿರಾಣಿ, ಸಿ.ಟಿ.ರವಿ ಸೇರಿದಂತೆ ಎರಡೂ ಪಕ್ಷಗಳ ಶಾಸಕರು ಹಾಗೂ ವಿಧಾನಪರಿಷತ್ ಸದಸ್ಯರು ಭಾಗವಹಿಸಿದ್ದರು.

## ಲಿಂಗಸೂಗೂರು : ಬೀದಿ ಬದಿ ವ್ಯಾಪಾರಸ್ಥರ ತೆರವು ವಿರೋಧಿಸಿ ಪ್ರತಿಭಟನೆ

ಇದೀಗ ವ್ಯಾಪಾರ ಸ್ಥಳಗಳನ್ನು ತೆರವುಗೊಳಿಸಿದರೆ ಸಾಲ ತೀರಿಸುವುದು ಹೇಗೆ ಎಂದು ಪ್ರಶ್ನಿಸಿದರು. ಬೀದಿ ಬದಿ ವ್ಯಾಪಾರಸ್ಥರ ಹಕ್ಕುಗಳ ಕುರಿತು ಸರ್ವೋಚ್ಚ ನ್ಯಾಯಾಲಯ ನೀಡಿರುವ ಆದೇಶವನ್ನು ಪಾಲಿಸದೇ, ಕುಂದುಕೊರತೆ ನಿವಾರಣಾ ಸಮಿತಿ ರಚಿಸದೇ ತೀರ್ಮಾನ ಕೈಗೊಂಡಿರುವುದು ಅಧಿಕಾರಿಗಳ ಬೇಜವಾಬ್ದಾರಿತನವಾಗಿದೆ ಎಂದು ಆರೋಪಿಸಿದರು.

ವಾಹನ ಸಂಚಾರಕ್ಕೆ ಅಡಚಣೆ ಆಗದಂತೆ ಹಾಗೂ ಸ್ವಚ್ಛತೆ ಕಾಪಾಡುವ ನಿಬಂಧನೆಗಳನ್ನು ವಿಧಿಸಿ ವ್ಯಾಪಾರಕ್ಕೆ ಅವಕಾಶ ಕಲ್ಪಿಸಬೇಕು. 569 ಬೀದಿ ಬದಿ ವ್ಯಾಪಾರಸ್ಥರ ಕುಟುಂಬಗಳ ಭವಿಷ್ಯವನ್ನು ಗಮನದಲ್ಲಿಟ್ಟು ನ್ಯಾಯಯುತ ತೀರ್ಮಾನ ಕೈಗೊಳ್ಳಬೇಕು ಎಂದು ಪುರಸಭೆ ಅಧಿಕಾರಿಗಳು ಹಾಗೂ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಪುರಸಭೆ ಮುಖ್ಯಾಧಿಕಾರಿಗಳ ಆರೋಗ್ಯ ಸಮಸ್ಯೆ ಹಿನ್ನೆಲೆಯಲ್ಲಿ ಸ್ಥಳಕ್ಕೆ ಆಗಮಿಸದಿದ್ದುದರಿಂದ ಅಸಮಾಧಾನಗೊಂಡ ಪ್ರತಿಭಟನಕಾರರು, ಜ.29ರಂದು ತೆರವು ಕಾರ್ಯ ಕೈಬಿಡುವ ಭರವಸೆ ನೀಡುವವರೆಗೆ ಪ್ರತಿಭಟನೆ ಮುಂದುವರಿಸುವುದಾಗಿ ಎಚ್ಚರಿಸಿದರು. ಬಳಿಕ ಫೋನ್ ಮೂಲಕ ಮಾತನಾಡಿದ ಪುರಸಭೆ ಮುಖ್ಯಾಧಿಕಾರಿಗಳು, ತಾತ್ಕಾಲಿಕವಾಗಿ ತೆರವು ಕಾರ್ಯವನ್ನು ನಿಲ್ಲಿಸಿ, ಮುಂದಿನ ದಿನಗಳಲ್ಲಿ ಸಭೆ ನಡೆಸಿ ಸೂಕ್ತ ತೀರ್ಮಾನ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಹಿಂಪಡೆದು ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಹಿಬೂಬ್ ಪಾಷಾ, ಹಸ್ಮತ್, ಯೇಶುಮಿತ್ರಾ, ನೀಲಕಂಠ ಅನಿಲ್, ರೇಣುಕಾ, ನಿತ್ಯಾನಂದ, ರಾಬಿಯ ಸೇರಿದಂತೆ ಅನೇಕ ಬೀದಿ ಬದಿ ವ್ಯಾಪಾರಸ್ಥರು ಉಪಸ್ಥಿತರಿದ್ದರು.

# ರಾಯಚೂರು ಉತ್ಸವದ ಸೈಕ್ಲಾಥಾನ್ ಉತ್ಸಾಹದಿಂದ 20 ಕಿ.ಮೀ ಸೈಕಲ್ ತುಳಿದ ಸ್ಪರ್ಧಾಳುಗಳು

ಸಣ್ಣ ವೀರೇಶ ಅವರು ತೃತೀಯ ಬಹುಮಾನ ಗಿಟ್ಟಿಸಿದರು. ಈ ಸ್ಪರ್ಧೆಯಲ್ಲಿ ಏಕೈಕ ಮಹಿಳಾ ಪಟುವಾಗಿ ಡಾ.ಶಿಲ್ಪ ಅವರು ಭಾಗಿಯಾಗಿ ಗಮನ ಸೆಳೆದರು. ಪ್ರಥಮ ಸ್ಥಾನಕ್ಕೆ 10 ಸಾವಿರ ರೂ., ದ್ವಿತೀಯ ಸ್ಥಾನಕ್ಕೆ 5 ಸಾವಿರ ಹಾಗೂ ತೃತೀಯ ಸ್ಥಾನಕ್ಕೆ 3 ಸಾವಿರ ರೂ.ಗಳನ್ನು ನೀಡಿ ಗೌರವಿಸಲಾಯಿತು.

ಶಾಲಾ ವಿದ್ಯಾರ್ಥಿಗಳು ಭಾಗಿ: ಈ ಸೈಕಲ್ ಮ್ಯಾರಾಥಾನ್‌ದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವೈದ್ಯರು ಭಾಗಿಯಾಗಿದ್ದು ವಿಶೇಷವಾಗಿತ್ತು. ವಿದ್ಯಾರ್ಥಿಗಳಾದ ಹಸನ್, ಶ್ರೇಯಸ್, ಗಣೇಶ್ ಮಿಶ್ರಬ್, ಮಹಮ್ಮದ್ ಆಸಂಖಾನ್, ದೇವರಾಜ್, ಮನೀಶ್, ಶ್ರೇಯಾಂಕ ಅವರು ಸಹ ಭಾಗಿಯಾಗಿ ಸೈಕಲ್ ಓಡಿಸಿ ಸಂಭ್ರಮಿಸಿದರು.

ಇದೇ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ್ ನಾಯಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್, ಎನ್.ವಿ.ಡಿ ಸ್ಪರ್ಧಾ ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ, ಲಿವಿಂಗ್ ಆಫ್ ಆರ್ಟ ಸಂಸ್ಥೆಯ ಮಲ್ಲಿಕಾರ್ಜುನ ಸ್ವಾಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರು, ಸೈಕ್ಲಿಂಗ್ ಅಸೋಸಿಯೇಷನ್ ಅಧ್ಯಕ್ಷರಾದ ಡಾ.ಬಸವರಾಜ, ಕೃಷ್ಣ ತುಂಗೆ ರೋಟರಿ ಕ್ಲಬ್‌ನ ಪದಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಪಕ್ಷವನ್ನು ಗೇಲ್ಲಿಸಿ ಇತಿಹಾಸವನ್ನು ಸೃಷ್ಟಿಸುವುದಕ್ಕೆ ಇಂದಿನಿಂದಲ್ಲೇ ಸಿದ್ದತೆ:ಬಿ.ವಿನಾಯಕ

ಬಿ.ಎಲ್.ಎ.–1 ಎಂದು ಪಕ್ಷದಿಂದ ನೇಮಕ ಮಾಡಲಾಗುತ್ತದೆ ಅದ್ದರಿಂದ ಬೂತ್ ಮಟ್ಟದ ಪಕ್ಷದ ಕಾರ್ಯಕರ್ತರು ಮತಪಟ್ಟಿಯ ಸ್ವಚ್ಚತೆಗೆ ಶ್ರಮಿಸುವುದರಿಂದ ಮುಂಬರುವ ಗ್ರಾಮ ಪಂಚಾಯಿತಿ ,ತಾ.ಪಂ.ಜಿ.ಪಂಚಾಯಿತಿ ಚುನಾವಣೆಗಳಲ್ಲಿ ಪಕ್ಷದ ಕಾರ್ಯಕರ್ತರು ಗೇಲುವುದಕ್ಕೆ ಸಾಧ್ಯವಾಗುತ್ತದೆ. ಮುಂಬರುವ ಏಪ್ರೀಲ್ ಮತ್ತು ಮೇ ತಿಂಗಳಲ್ಲಿ ಬರುವ ಸ್ಥಳಿಯ ಚುನಾವಣೆಯಲ್ಲಿ ಪಕ್ಷದಿಂದ ಟಿಕೇಟ್ ಪಡೆದುಕೊಂಡು ಸ್ಪರ್ಧಿಸುವ ಪಕ್ಷದ ಕಾರ್ಯಕರ್ತರ ಗೇಲುವಿಗೆ ಶ್ರಮಿಸುತ್ತೇನೆ.

ಪಕ್ಷ ಬೆಳೆದಾಗ ಮಾತ್ರ ಪಕ್ಷ ಬೆಳೆಯುತ್ತದೆ. ಮುಂದಿನ ದಿನಗಳಲ್ಲಿ ಮಾನ್ವಿ ವಿಧಾನಸಭಾ ಕ್ಷೇತ್ರದ ಮೀಸಲಾತಿ ಇರಲಿ ಬಿಡಲಿ ಪಕ್ಷದ ಶಾಸಕರನ್ನು ಗೇಲಿಸಿದಾಗ ಮಾತ್ರ ಕಾರ್ಯಕರ್ತರು ಉಳಿಯುವುದಕ್ಕೆ ಸಾಧ್ಯವಾಗುತ್ತದೆ ಜಿಲ್ಲೆಯ ಎಲ್ಲಾ 7 ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಪಕ್ಷವನ್ನು ಗೇಲಿಸಿ ಇತಿಹಾಸವನ್ನು ಸೃಷ್ಟಿಸುವುದಕ್ಕೆ ಇಂದಿನಿಂದಲ್ಲೇ ಸಿದ್ದತೆಗಳನ್ನು ಮಾಡಿಕೊಳ್ಳೋಣ್ಣ ರಾಜ್ಯದಲ್ಲಿ ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿರುವವರೆಗೆ ಮಾತ್ರ ರಾಜ್ಯದಲ್ಲಿ ಕಾಂಗ್ರೇಸ್ ಪಕ್ಷ ಉಸಿರಾಡುತ್ತದೆ ಅವರನ್ನು ತೆಗೆದ ನಂತರ ಸರ್ಕಾರ ಉಳಿಯುವುದಿಲ್ಲ ಅದ್ದರಿಂದ ಪಕ್ಷದ ಕಾರ್ಯಕರ್ತರು ನಿರಾಶರಾಗಬೇಡಿ ಮಾನ್ವಿ ಕ್ಷೇತ್ರದಲ್ಲಿ ಹೊಸ ಇತಿಹಾಸವನ್ನು ಬರೆಯೋಣ .

ರಾಜ್ಯ ಸರ್ಕಾರ ಗ್ಯಾರಂಟಿಯೋಜನೆಗಳಿಂದ ದಿವಾಳಿಯಾಗಿದ್ದು ರೈತರ ಜೀವನಾಡಿಯಾಗಿರುವ ತುಂಗಭದ್ರ ಅಣೇಕಟ್ಟೆಯ ಕ್ರಸ್ಟ್ ಗೇಟ್ ಗಳ ಜೋಡಣೆಗೆ ಆಂಧ್ರ ಮತ್ತು ತೆಲಂಗಾಣ ಸರ್ಕಾರಗಳು ತಮ್ಮ ಪಾಲನ್ನು ನೀಡಿದ್ದು ರಾಜ್ಯ ಸರ್ಕಾರ ನೀಡಿದ 10 ಕೋಟಿಯನ್ನು ಕೂಡ ಹಿಂದಕ್ಕೆ ಪಡೆದುಕೊಂಡಿರುವುದಾಗಿ ಸ್ವತಃ ಅಣೇಕಟ್ಟೆ ಗೇಟ್ ಗಳ ತಜ್ಞರಾದ ಕನ್ನಯ ನಾಯ್ಡು ರವರೆ ಮಾಧ್ಯಮಗಳ ಮುಂದೆ ಹೇಳಿಕೆ ನೀಡಿದ್ದಾರೆ ತುಂಗಭಾದ್ರ ಅಣೇಕಟ್ಟೆ ದುರಸ್ತಿಗಾಗಿ ಬೇಸಿಗೆ ಬೆಳೆಯನ್ನು ರೈತರು ಕಳೆದು ಕೊಂಡಿದ್ದು ಮುಂಬರುವ ಜೂನ್ ಬೆಳೆಗಾದರು ಕಾಲುವೆ ಮೂಲಕ ನೀರು ದೊರೆಯುತ್ತದೆ ಎಂದು ಎನ್ನುವ ಬರವಸೆಯಲ್ಲಿ ಇರುವ ರೈತರಿಗೆ ರಾಜ್ಯ ಸರ್ಕಾರ ಅನ್ಯಾಯ ಮಾಡುತ್ತಿದ್ದೆ ಅದ್ದರಿಂದ ಮುಂದಿನ ದಿನಗಳಲ್ಲಿ ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಯನ್ನು ವಿರೋಧಿಸಿ ಮಾನ್ವಿ ಪಟ್ಟಣದಲ್ಲಿ ಬೃಹತ್ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಮಾಜಿ ಶಾಸಕ ಬಸವನಗೌಡ ಬ್ಯಾಗವಾಟ ಮಾತನಾಡಿ ಕೇಂದ್ರ ಸರ್ಕಾರ ದೇಶದಲ್ಲಿ ಮಹಾತ್ಮಗಾಂಧಿಯವರ ರಾಮರಾಜ್ಯದ ಕನಸನ್ನು ನನಸು ಮಾಡುವುದಕ್ಕೆ ಮುಂದಾಗಿದೆ. ಎಸ್.ಐ.ಆರ್ ಹಾಗೂ ದೇಶದ ಗ್ರಾಮೀಣ ಜನರ ಅಭಿವೃದ್ದಿಗಾಗಿ ಇರುವ ವಿಬಿ–ಜಿ,ರಾಮ–ಜೀ ಎಂದರೆ ವಿಕಸಿತ ಬಾರತ ಉದ್ಯೋಗ ಖಾತ್ರಿ ಮತ್ತು ಅಜೀವಿಕಾ ಮಿಷನ್ ಗ್ರಾಮೀಣ ಕಾಯ್ದೆ ಇದನ್ನು ಕಾಂಗ್ರೇಸ್ ಪಕ್ಷದವರು ಜನರಿಗೆ ತಪ್ಪು ಮಾಹಿತಿಯನ್ನು ನೀಡುವ ಮೂಲಕ ಜನರಲ್ಲಿ ಕೇಂದ್ರ ಸರ್ಕಾರದ ಅಭಿವೃದ್ದಿ ಯೋಜನೆಗಳ ಬಗ್ಗೆ ತಪ್ಪು ಅಭಿಪ್ರಾಯ ಬರುವಂತೆ ಮಾಡುತ್ತಿದ್ದಾರೆ ಅದ್ದರಿಂದ ಬೆಜೆಪಿ ಕಾರ್ಯಕರ್ತರು ಎಸ್.ಐ.ಆರ್ ಹಾಗೂ ವಿಬಿ–ಜಿ,ರಾಮ–ಜೀ ಕುರಿತು ಕಾರ್ಯಗಾರದಲ್ಲಿ ಸಂಪೂರ್ಣವಾಗಿ ತಿಳಿದುಕೊಳ್ಳುವ ಮೂಲಕ ತಮ್ಮ ಗ್ರಾಮದಲ್ಲಿನ ಜನರಿಗೆ ಕೇಂದ್ರ ಸರ್ಕಾರದ ಯೋಜನೆಗಳ ಬಗ್ಗೆ ಸರಿಯಾದ ಮಾಹಿತಿಯನ್ನು ನೀಡಬೇಕು ಎಂದು ತಿಳಿಸಿದರು.

ಕಾರ್ಯಗಾರದಲ್ಲಿ ಜಿಲ್ಲಾ ಪ್ರ.ಕಾರ್ಯದರ್ಶಿ ಸಂತೋಷ ರಾಜಗುರು ಎಸ್.ಐ.ಆರ್ ಹಾಗೂ ವಿಬಿ–ಜಿ,ರಾಮ–ಜೀ ಕುರಿತು ಸಂಪೂರ್ಣವಾದ ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಬಿ.ಜೆ,ಪಿ, ಪಕ್ಷದ ಅಧ್ಯಕ್ಷರಾದ ವೀರನಗೌಡ ಲಕ್ಕಿಹಾಳ್, ಮಾನ್ವಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗವತಿ, ಸಿರವಾರ ಮಂಡಲ ಅಧ್ಯಕ್ಷರಾದ ಆರ್.ಕೆ.ಅಮರೇಶ ಸಾಹುಕರ್, ತಿಮ್ಮರೆಡ್ಡಿ ಭೋಗವತಿ, ನರಸಿಂಹ ಕರಡಿಗುಡ್ಡ, ರವಿಜಾಲ್ದಾರ್, ಜಿಲ್ಲಾ ಉಪಾಧ್ಯಕ್ಷರಾದ ಶರಣಪ್ಪಗೌಡ, ಜಿಲ್ಲಾ ಪ.ಪಂಗಡ ಮೋರ್ಚ ಅಧ್ಯಕ್ಷರಾದ ವೀರೇಶನಾಯಕ ಬೆಟ್ಟದೂರು, ಜಿಲ್ಲಾ ಕಾರ್ಯದರ್ಶಿ ಮಲ್ಲಿಕಾರ್ಜುನ ಜಕ್ಕಲದಿನ್ನಿ,ನಾಗಲಿಂಗಸ್ವಾಮಿ,ತಾ.ಪ್ರ.ಕಾರ್ಯದರ್ಶಿ ಗುರುಗೌಡ ಕಣ್ಣೂರು, ಹನುಮೇಶ ಜೀನೂರು ಸೇರಿದಂತೆ ವಿವಿಧ ಮೋರ್ಚಗಳ ಪದಾಧಿಕಾರಿಗಳು ,ಮುಖಂಡರು. ಕಾರ್ಯಕರ್ತರು ಭಾಗವಹಿಸಿದರು.

## ದೇವದುರ್ಗ ಪ್ರೀಮಿಯರ್ ಲೀಗ್ ಉದ್ಘಾಟನೆ

# ಯಶಸ್ಸು ಹಾಗೂ ಸೋಲು ಎರಡನ್ನೂ ಸಮನವಾಗಿ ಸ್ವೀಕರಿಸಿ :ಕೆಶಿನ



ಯುವಮಾರ್ಗ ಸುದ್ದಿ

**ದೇವದುರ್ಗ,ಜ.27**–ಕ್ರೀಡೆಗಳಲ್ಲಿ ನಿರಂತರ ಅಭ್ಯಾಸ ಮತ್ತು ಸ್ಪರ್ಧೆಯಲ್ಲಿ ಭಾಗವಹಿಸುವುದರಿಂದ ಯಶಸ್ಸು ಹಾಗೂ ಸೋಲು ಎರಡನ್ನೂ ಸಮಾನವಾಗಿ ಸ್ವೀಕರಿಸುವ ಹೋರಾಟ ವ್ಯಕ್ತಿಯ ಆತ್ಮವಿಶ್ವಾಸವನ್ನು ಬಲಪಡಿಸುತ್ತದೆ. ಸರಿಯಾದ ಮುಂದಾಳತ್ವವು ಮತ್ತು ಗೋಲು ಸಾಧನೆಗಾಗಿ ಯತ್ನಿಸುವ ಮನೋಭಾವವು ವ್ಯಕ್ತಿತ್ವದಲ್ಲಿ ಪ್ರಭಾವ ಬೀರುತ್ತದೆ ಎಂದು ಮಂಗಳವಾರ ನಡೆದ ದೇವದುರ್ಗ ಪ್ರೇಮಿಯರ್ ಲೀಗ್ ಉದ್ಘಾಟನೆ ಮಾಡಿದ ಮಾಜಿ ಸಚಿವರು ಕೆ ಶಿವನಗೌಡ ನಾಯಕ ಅವರು ಅಭಿವ್ಯಕ್ತಪಡಿಸಿದರು.

ಒಟ್ಟು 09 ತಂಡಗಳು ಭಾಗವಹಿಸಲಿವೆ. ಪ್ರಥಮ ಬಹುಮಾನ 50000 ನಗದು ಮತ್ತು ಟ್ರೋಫಿ ಕೊಡುಗೆ ಶ್ರೀ ಕೆ ಶಿವನಗೌಡ ನಾಯಕ ಮಾಜಿ ಸಚಿವರು. ದ್ವಿತೀಯ ಬಹುಮಾನ 25000 ಮತ್ತು ಟ್ರೋಫಿ ಕೊಡುಗೆ ಶ್ರೀ ನವೀನ್ ಕುಮಾರ್ ಬಿ ಜೆ ಪಿ ಒಬಿಸಿ ಮೋರ್ಚಾ ಅಧ್ಯಕ್ಷರು,ತೃತೀಯ ಬಹುಮಾನ 15000 ಮತ್ತು ಟ್ರೋಫಿ ಕೊಡುಗೆ ಶ್ರೀ ಮುರಿಗೆಯ್ಯ ಸ್ವಾಮಿ ಯಾರಮಸಾಳ ಅವರು ನೀಡಲಿದ್ದಾರೆ.

ಈ ಸಂದರ್ಭದಲ್ಲಿ ಶರಣಬಸವ ಪಾಟೀಲ ಜೊಳದಡಗಿ ಅಧ್ಯಕ್ಷರು ದೇವದುರ್ಗ ಜಂಬಣ್ಣ ನೀಲಗಲ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗನಗೌಡ ಜೊಳದಡಗಿ ಡಾ ಬಸವರಾಜ ಹೇರೂರ ಪ್ರಧಾನ ಕಾರ್ಯದರ್ಶಿಗಳಾದ ಕೆಂಚಣ್ಣ ಪೂಜಾರಿ ಕೊತ್ತದೊಡ್ಡಿ ಬಸನಗೌಡ ಮುಲ್ಕಿ ಬಸವರಾಜ ಅಕ್ಕರಕಿ ಬಸನಗೌಡ ಮಲ್ಕಿ ಸತೀಶ್ ಬಂಡೆಗುಡ್ಡ ನಾಗಪ್ಪ ನಾಡದಾಳ ನಾಗಪ್ಪ ಉಪ್ಪಾರ ನಾಗರಾಜ ಗೋಗಿ ವೆಂಕಟೇಶ ಸೋಮಕಾರ ಬಸ್ಸಣ್ಣ ಗಲಗ ನವಿನ ಇನ್ನಿತರರು ಉಪಸ್ಥಿತರಿದ್ದರು.

# ಗ್ರಾ.ಪಂ.ಗಳಿಗೆ ಗಾಂಧೀಜಿ ಹೆಸರು : ಸಿಎಂ

**ಬೆಂಗಳೂರು, ಜ. 27–** ರಾಜ್ಯದ ಎಲ್ಲ ಗ್ರಾಮ ಪಂಚಾಯ್ತಿಗಳಿಗೆ ಮಹಾತ್ಮಗಾಂಧಿ ಹೆಸರನ್ನು ನಾಮಕರಣ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿಂದು ವಿಬಿಜಿ ರಾಮ್‌ಜಿ ಕಾಯ್ದೆ ವಿರೋಧಿಸಿ ಹಾಗೂ ಮನರೇಗಾ ಕಾಯ್ದೆ ಮರು ಸ್ಥಾಪಿಸುವಂತೆ ಆಗ್ರಹಿಸಿ ರಾಜ್ಯ ಕಾಂಗ್ರೆಸ್ ನಡೆಸಿದ ಪ್ರತಿಭಟನಾ ಧರಣಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಾಜ್ಯದ ಎಲ್ಲ ಗ್ರಾ.ಪಂ.ಗಳಿಗೆ ಮಹಾತ್ಮಗಾಂಧಿ ಹೆಸರನ್ನು ನಾಮಕರಣ ಮಾಡುತ್ತೇವೆ ಎಂದು ಹೇಳಿದರು.

ಕರ್ನಾಟಕದ 6 ಸಾವಿರ ಗ್ರಾಮ ಪಂಚಾಯ್ತಿಗಳಿಗೆ ಮಹಾತ್ಮಗಾಂಧಿ ಹೆಸರನ್ನು ನಾಮಕರಣ ಮಾಡುತ್ತೇವೆ. ಮುಂದಿನ ಬಜೆಟ್‌ನಲ್ಲೇಯೇ ಈ ಬಗ್ಗೆ ಅಧಿಕೃತ ಘೋಷಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದರು.
ಗಾಂಧೀಜಿ ಅವರನ್ನು ಆರ್‌ಎಸ್‌ಎಸ್ ನ ಗೋಡ್ಸೆ ಕೊಂದರು. ಈಗ ಆರ್‌ಎಸ್‌ಎಸ್ ಪ್ರೋತ್ಸಾಹದಿಂದಲೇ ಮನರೇಗಾದಿಂದ ಗಾಂಧೀಜಿ ಹೆಸರನ್ನು 2ನೇ ಬಾರಿಗೆ ಹತ್ಯೆ ಮಾಡಿದ್ದಾರೆ ಎಂದು ದೂರಿದರು.

ಮಹಾತ್ಮಗಾಂಧೀಜಿಯವರ ಶ್ರಮ ಸಂಸ್ಕೃತಿಯ ರೂಪದಂತಿರುವ ಮನರೇಗಾ ಯೋಜನೆ ರದ್ದುಪಡಿಸಿ, ವಿಜಿಬಿ ರಾಮ್ ಜಿ ಕಾಯ್ದೆ ತರಲು ನಾವು ಬಿಡುವುದಿಲ್ಲ. ಗಾಂಧೀಜಿ ಹೆಸರನ್ನು ಪಂಚಾಯ್ತಿಗಳಿಗೆ ನಾಮಕರಣ ಮಾಡುತ್ತೇವೆ ಎಂದರು.
ರಾಜ್ಯದಲ್ಲಿರುವ ಸುಮಾರು 6 ಸಾವಿರ ಪಂಚಾಯ್ತಿ ಕಚೇರಿಗಳಿಗೆ ಮಹಾತ್ಮ ಗಾಂಧಿ ಅವರ ಹೆಸರಿಡಲಾಗುವುದು. ಇದು ಕಾಂಗ್ರೆಸ್ ಪಕ್ಷದ ತೀರ್ಮಾನ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.
ಸ್ವಾತಂತ್ರ್ಯ ಉದ್ಯಾನದಲ್ಲಿ ಇಂದು ನಡೆದ ಲೋಕಭವನ ಚಲೋ ಮಹಾತ್ಮ ಗಾಂಧಿ ನರೇಗಾ ಬಚಾವ್ ಸಂಗ್ರಾಮ ಪ್ರತಿಭಟನೆ ಕಾರ್ಯಕ್ರಮದಲ್ಲಿ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಶಿವಕುಮಾರ್ ಅವರು ಮಾತನಾಡಿದರು.
"ಕೆಪಿಸಿಸಿ ಉಪಾಧ್ಯಕ್ಷರಾದ ಉಗ್ರಪ್ಪ ಹಾಗೂ ಕೆಪಿಸಿಸಿ ಪದಾಧಿಕಾರಿಗಳು ಈ ವಿಚಾರವಾಗಿ ನಮಗೆ ಪತ್ರ ಬರೆದಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿಯವರಿಗೆ ಮನವಿ ಮಾಡಲಾಗಿದೆ. ಆ ಮೂಲಕ ಮಹಾತ್ಮ ಗಾಂಧಿ ಅವರ ಹೆಸರನ್ನು ಶಾಶ್ವತವಾಗಿ ಉಳಿಸಿಕೊಳ್ಳುವ ಕೆಲಸ ಮಾಡಲಾಗುವುದು. ಹಳ್ಳಿಗೊಂದು ಶಾಲೆ, ಸಹಕಾರ ಸಂಘ, ಪಂಚಾಯ್ತಿ ಇರಬೇಕು ಎಂಬುದು ಗಾಂಧೀಜಿ ಅವರ ಸಂಕಲ್ಪ" ಎಂದು ತಿಳಿಸಿದರು.

ಬಿಜೆಪಿ ವಿರುದ್ಧ ವಾಗ್ದಾಳಿ–"ಬಿಜೆಪಿ ನಾಯಕರು ಗಾಂಧಿ ಪ್ರತಿಮೆ ಮುಂದೆ ಕೂತು ಪ್ರತಿಭಟನೆ ಮಾಡುತ್ತಿದ್ದಾರೆ ಎಂಬ ಮಾಹಿತಿ ಬಂತು. ಬಿಜೆಪಿಯವರು ಗಾಂಧಿ ಪ್ರತಿಮೆ ಮುಂದೆ ಕೂರುವ ಹಕ್ಕನ್ನು ಕಳೆದುಕೊಂಡಿದ್ದೀರಿ. ಇನ್ನುಮುಂದೆ ನಿಮ್ಮ ಕಚೇರಿಯಲ್ಲಿ ಗಾಂಧಿ ಭಾವಚಿತ್ರ ಇಟ್ಟುಕೊಳ್ಳುವ ಯೋಗ್ಯತೆ ನಿಮಗಿಲ್ಲ. ಗಾಂಧಿ ಅವರನ್ನು ನಾಥುರಾಮ್ ಗೋಡ್ಸೆ ಹತ್ಯೆ ಮಾಡಿದ್ದಲ್ಲದೇ, ಬಿಜೆಪಿ ಹಾಗೂ ಎನ್ ಡಿಎ ಸರ್ಕಾರ ಈಗ ಮತ್ತೆ ಗಾಂಧೀಜಿ ಅವರನ್ನು ಹತ್ಯೆ ಮಾಡುತ್ತಿದ್ದೀರಿ. ಅವರ ಹೆಸರನ್ನು ಅಳಿಸಿಹಾಕಲು ಸಾಧ್ಯವಿಲ್ಲ" ಎಂದು ತಿಳಿಸಿದರು.

"ಹಳ್ಳಿಗಳ ಉದ್ಧಾರಕ್ಕೆ ನೀಡಿದ ಯೋಜನೆ ನರೇಗಾ. ಬಿಜೆಪಿಯಿಂದ ದೇಶಕ್ಕೆ ಹರಡುತ್ತಿದೆ ನಿರುದ್ಯೋಗದ ರೋಗ. ಬಿಜೆಪಿ ಗಾಂಧಿ ದ್ವೇಷಕ್ಕೆ ಧಿಕ್ಕಾರ. ನರೇಗಾ ರದ್ದಾಗಲು ಎಂದಿಗೂ ಬಿಡುವುದಿಲ್ಲ. ಬೇಡ ನಮಗೆ ವಿಬಿ ಗ್ರಾಮ್ ಜೀ. ಬೇಕೆ ಬೇಕು ನಮಗೆ ಗಾಂಧಿ. ಇವತ್ತು ಪೊಲೀಸರು ನಮ್ಮನ್ನು ಬಂಧಿಸಿದರೂ ನಾವು ಹಿಂಜರಿಯುವುದಿಲ್ಲ, ಸರ್ಕಾರ
ಇದ್ದರೂ ನಾವು ಜೈಲಿಗೆ ಹೋದರೂ ಸರಿ, ನರೇಗಾ ಯೋಜನೆ ಮರುಜಾರಿಗೆ ಹೋರಾಟ ಮುಂದುವರಿಸುತ್ತೇವೆ. ಕೇಂದ್ರ ಸರ್ಕಾರ ಕೃಷಿ ಕರಾಳ ಕಾಯ್ದೆಯನ್ನು ಹಿಂಪಡೆದಂತೆ ಇದನ್ನು ಹಿಂಪಡೆಯುವವರೆಗೂ ನಮ್ಮ ಹೋರಾಟ ನಡೆಯಲಿದೆ" ಎಂದು ಸಂದೇಶ ಸಾರಿದರು.

ಎಚ್‌ಡಿಕೆ –ಬಿಜೆಪಿ ಚರ್ಚೆಗೆ ಬರಲಿ–"ಕುಮಾರಸ್ವಾಮಿ, ಬಿಜೆಪಿ ನಾಯಕರು ಚರ್ಚೆಗೆ ಬರಲಿ, ನಾನು ಸಿದ್ಧನಿದ್ದೇನೆ. ಈ ಯೋಜನೆ ಜಾರಿಯಾಗಿ 20 ವರ್ಷಗಳಿವೆ. ಕಳೆದ 11 ವರ್ಷಗಳಿಂದ ನಿಮ್ಮದೇ ಸರ್ಕಾರ ಅಧಿಕಾರದಲ್ಲಿದೆ. ಈ ಯೋಜನೆಯಲ್ಲಿ ಅಕ್ರಮ ನಡೆದಿದ್ದರೆ ನೀವು ಏನು ಮಾಡುತ್ತಿದ್ದಿರಿ? ನಮ್ಮ ಪಂಚಾಯ್ತಿಗಳಲ್ಲಿ ಅಕ್ರಮ ನಡೆದ ಪ್ರಕರಣಗಳಲ್ಲಿ ನಾವು ಕ್ರಮ ಕೈಗೊಂಡಿದ್ದೇವೆ. ಯಾರೋ ಕೆಲವರು ತಪ್ಪು ಮಾಡಿದರೆ ಇಡೀ ಯೋಜನೆಯನ್ನೇ ಬದಲಿಸುವುದೇ? ಆಮೂಲಕ ಮೂಗು ಕತ್ತರಿಸಿಕೊಳ್ಳುವ ಕೆಲಸ ಮಾಡುವುದು ಸರಿಯೇ?" ಎಂದು ಕಿಡಿಕಾರಿದರು.

"ಕೇಂದ್ರ ಬಿಜೆಪಿ ಸರ್ಕಾರ ನರೇಗಾ ಯೋಜನೆ ಅನುದಾನವನ್ನು ಬಾಕಿ ಉಳಿಸಿಕೊಂಡಿದೆ. ಬಿಜೆಪಿ ಆಡಳಿತ ರಾಜ್ಯಗಳಲ್ಲಿ ಕೇಂದ್ರ ಸರ್ಕಾರದ ನೂತನ ಯೋಜನೆ ಅನುಷ್ಠಾನ ಸಾಧ್ಯವಿಲ್ಲ. ಎನ್ ಡಿಎ ಮೈತ್ರಿ ನಾಯಕ ಚಂದ್ರಬಾಬು ನಾಯ್ಡು ಅವರೇ ಈ ಯೋಜನೆಗೆ ಅಪಸ್ವರ ಎತ್ತಿದ್ದು, ಇದನ್ನು ಜಾರಿ ಸಾಧ್ಯವಿಲ್ಲ ಎಂದಿದ್ದಾರೆ. ಕೇಂದ್ರ ಬಿಜೆಪಿ ಸರ್ಕಾರ ನೂತನ ಕಾಯ್ದೆ ಹಿಂಪಡೆಯದಿದ್ದರೆ ಸರ್ಕಾರಕ್ಕೆ ಆಪತ್ತು ಎದುರಾಗಲಿದೆ. ಚಂದ್ರಬಾಬು ನಾಯ್ಡು ಅವರು ಎಚ್ಚರಿಕೆ ಗಂಟೆ ರವಾನಿಸಿದ್ದಾರೆ" ಎಂದರು.

"ಕೇಂದ್ರ ಸರ್ಕಾರ ರೈತರ, ಕಾರ್ಮಿಕರ ಹಕ್ಕು, ಪಂಚಾಯ್ತಿ ಅಧಿಕಾರ ಕಸಿಯುತ್ತಿದೆ. ಇದರ ವಿರುದ್ಧ ನಮ್ಮ ಹೋರಾಟ. ಮುಂದಿನ ದಿನಗಳಲ್ಲಿ ಪ್ರತಿ ಪಂಚಾಯ್ತಿಯಲ್ಲಿ ನರೇಗಾ ಕಾರ್ಮಿಕರನ್ನು ಒಳಗೊಂಡು ತಾಲ್ಲೂಕು ಮಟ್ಟದಲ್ಲಿ 5 ಕಿ.ಮೀ ಪಾದಯಾತ್ರೆ ನಡೆಸಲಾಗುವುದು. ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಪರಿಷತ್ ಸದಸ್ಯರ ನೇತೃತ್ವದಲ್ಲಿ ಈ ಪಾದಯಾತ್ರೆ ನಡೆಯಬೇಕಿದೆ" ಎಂದು ತಿಳಿಸಿದರು.

ಮನರೇಗಾ ಮರು ಸ್ಥಾಪನೆಗೆ ಕೈ ಪ್ರತಿಭಟನೆ–ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿ ಆಡಳಿತರೂಢ ಕಾಂಗ್ರೆಸ್ ಪಕ್ಷ ಮನರೇಗಾವನ್ನು ಪುನರ್ ಸ್ಥಾಪಿಸಬೇಕು. ವಿಬಿ ಜಿ ರಾಮ್ ಜಿ ಕಾಯ್ದೆಯನ್ನು ರದ್ದುಗೊಳಿಸಬೇಕು ಎಂದು ಆಗ್ರಹಿಸಿ ಪ್ರತಿಭಟನೆ ನಡೆಸಿದರೆ, ಮತ್ತೊಂದು ಕಡೆ ಪ್ರತಿಪಕ್ಷವಾದ ಬಿಜೆಪಿ ಮತ್ತು ಜೆಡಿಎಸ್ ವಿಧಾನಸೌಧದ ಆವರಣದಲ್ಲಿರುವ ಮಹಾತ್ಮಗಾಂಧಿ ಪ್ರತಿಮೆ ಬಳಿ ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರಿಗೆ ಅಪಮಾನ ಮಾಡಿರುವುದನ್ನು ಖಂಡಿಸಿ ಹಾಗೂ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಅಬಕಾರಿ ಸಚಿವರಾದ ಆರ್.ಬಿ. ತಿಮ್ಮಾಪುರ್ ರವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನಾ ಧರಣಿ ನಡೆಸಿದವು.

ಕೇಂದ್ರ ಸರ್ಕಾರ ಮನರೇಗಾ ಯೋಜನೆಯನ್ನು ಪುನರ್ ಸ್ಥಾಪಿಸಬೇಕು ಹಾಗೂ ವಿಬಿ ಜಿ ರಾಮ್ ಜಿ ಕಾಯ್ದೆಯನ್ನು



ರದ್ದುಗೊಳಿಸಬೇಕು ಎಂದು ಆಗ್ರಹಿಸಿ ರಾಜ್ಯ ಕಾಂಗ್ರೆಸ್ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿಂದು ಪ್ರತಿಭಟನೆ ನಡೆಸಿ ರಾಜಭವನ ಚಲೋ ನಡೆಸಿತು.ರಾಜಭವನ ಚಲೋ ನಡೆಸಿ ರಾಜಭವನ ಮುತ್ತಿಗೆಗೆ ಯತ್ನಿಸಿದ ರಾಜ್ಯ ಕಾಂಗ್ರೆಸ್ ನಾಯಕರನ್ನು ಪೊಲೀಸರು ವಶಕ್ಕೆ ತೆಗೆದುಕೊಂಡರು.

ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿಂದು ನಡೆದ ನರೇಗಾ ಬಚಾವ್ ಸಂಗ್ರಾಮ್ ಬೃಹತ್ ಪ್ರತಿಭಟನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್, ರಣದೀಪ್ ಸುರ್ಜೇವಾಲಾ ಸೇರಿದಂತೆ ಹಲವು ಸಚಿವರ, ಕಾಂಗ್ರೆಸ್ ಶಾಸಕರುಗಳು, ಪ್ರಮುಖ ಮುಖಂಡರುಗಳು, ನೂರಾರು ಕಾರ್ಯಕರ್ತರುಗಳು ಭಾಗಿಯಾಗಿ ಮನರೇಗಾ ಪುನರ್ ಸ್ಥಾಪಿಸುವಂತೆ ಕೇಂದ್ರಕ್ಕೆ ಆಗ್ರಹಿಸಿದರು.
ಮನರೇಗಾ ಉಳಿಸುವ ಸಲುವಾಗಿ ಬೆಂಗಳೂರಿನಲ್ಲಿ ಕಾಂಗ್ರೆಸ್ ಪಕ್ಷ ಪ್ರತಿಭಟನೆ ನಡೆಸಿ ರಾಜಭವನ ಚಲೋ ನಡೆಸುತ್ತಿರುವಾಗಲೇ ರಾಜ್ಯದ ಪ್ರತಿ ತಾಲ್ಲೂಕಿನಲ್ಲೂ ಕಾಂಗ್ರೆಸ್ ಕಾರ್ಯಕರ್ತರು ಪಾದಯಾತ್ರೆ ನಡೆಸಿ ಮನರೇಗಾ ಪುನರ್ ಸ್ಥಾಪಿಸುವಂತೆ ಒತ್ತಾಯಿಸಿದರು.

ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿ ದೊಡ್ಡ ಸಂಖ್ಯೆಯಲ್ಲಿ ಸೇರಿದ್ದ ಕಾಂಗ್ರೆಸ್ ಕಾರ್ಯಕರ್ತರನ್ನು ಉದ್ದೇಶಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್, ಸುರ್ಜೇವಾಲಾ ಮಾತನಾಡಿ, ಈ ಹಿಂದಿನ ಯುಪಿಎ ಸರ್ಕಾರ ಮಹಾತ್ಮಗಾಂಧಿ ಹೆಸರಿನಲ್ಲಿ ಗ್ರಾಮೀಣ ಭಾಗದ ಜನರ ಉದ್ಯೋಗ ಹಕ್ಕಿಗೆ ಖಾತ್ರಿ ನೀಡಿತ್ತು. ಈಗ ಈ ಮನರೇಗಾ ಯೋಜನೆಯ ಸ್ವರೂಪವನ್ನೇ ಬದಲಾಯಿಸಲಾಗಿದೆ. ಸಾಂವಿಧಾನಿಕ ಹಕ್ಕಾಗಿ ಬಂದಿರುವ ಮನರೇಗಾವನ್ನು ಕೇಂದ್ರ ಸರ್ಕಾರ ನಾಶ ಮಾಡಲು ಹೊರಟಿದೆ ಎಂದು ಹರಿಹಾಯ್ದರು.

ಕೇಂದ್ರ ಸರ್ಕಾರ ಮನರೇಗಾ ಯೋಜನೆಯನ್ನು ಪುನರ್ ಸ್ಥಾಪಿಸಬೇಕು ಹಾಗೂ ವಿಬಿ ಜಿ ರಾಮ್ ಜಿ ಕಾಯ್ದೆಯನ್ನು ರದ್ದುಗೊಳಿಬೇಕು ಎಂದು ಆಗ್ರಹಿಸಿ ದೇಶದ ಉದ್ದಗಲಕ್ಕೂ ಕಾಂಗ್ರೆಸ್ ಹೋರಾಟ ರೂಪಿಸಿದೆ. ಅದರಂತೆ ಪ್ರತಿ ಪಂಚಾಯ್ತಿಗಳಲ್ಲೂ ಕಾಂಗ್ರೆಸ್ ಹೋರಾಟ ನಡೆಸಲಿದೆ ಎಂದು ಹೇಳಿದರು.
ಮನರೇಗಾ ಮರು ಸ್ಥಾಪಿಸುವವರೆಗೂ ನಮ್ಮ ಹೋರಾಟ ನಿಲ್ಲದು. ಕೃಷಿ ಕರಾಳ ಕಾಯ್ದೆ ಹಿಂಪಡೆದಂತೆ ವಿಬಿ ಜಿ ರಾಮ್ ಜಿ ಕಾಯ್ದೆ ಹಿಂಪಡೆಯುವವರೆಗೂ ನಮ್ಮ ಹೋರಾಟ ನಿಲ್ಲದು ಎಂದು ಕಾಂಗ್ರೆಸ್ ನಾಯಕರು ಘೋಷಿಸಿದರು.

ಪ್ರತಿ ವರ್ಷ ಮನರೇಗಾ ಯೋಜನೆಯಡಿ 6 ಸಾವಿರ ಕೋಟಿ ರೂ. ಕಾಮಗಾರಿಗಳು ನಡೆಯುತ್ತಿದ್ದವು. ಗ್ರಾಮೀಣ ಭಾಗದ ಜನರಿಗೆ ಉದ್ಯೋಗ ದೊರೆಯುತ್ತಿತ್ತು. ಆದರೆ ಕೇಂದ್ರ ಸರ್ಕಾರ ಮನರೇಗಾವನ್ನು ಬದಲಿಸಿ ವಿಬಿ ಜಿ ರಾಮ್ ಜಿ ಕಾಯ್ದೆ ತಂದಿರುವುದು ಸರಿಯಲ್ಲ. ಕೂಡಲೇ ಮನರೇಗಾವನ್ನು ಮರು ಸ್ಥಾಪಿಸಬೇಕು ಎಂದು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ಕಾಂಗ್ರೆಸ್ ನಾಯಕರುಗಳು ಆಗ್ರಹಿಸಿದರು.
ಮನರೇಗಾವನ್ನು ಮರು ಸ್ಥಾಪಿಸುವಂತೆ ಆಗ್ರಹಿಸಿ ನಾವು ವಿಧಾನಸಭೆಯಲ್ಲೂ ನಿರ್ಣಯ ಕೈಗೊಳ್ಳುತ್ತೇವೆ. ಈ ಬಗ್ಗೆ ಬಹಿರಂಗ ಚರ್ಚೆಗೂ ಸಿದ್ದವಿದ್ದೇವೆ ಎಂದು ಕೈ ನಾಯಕರುಗಳು ಹೇಳಿದರು.

ರಾಜಭವನ ಚಲೋ ತಡೆದ ಪೊಲೀಸರು–ಸ್ವಾತಂತ್ರ್ಯ ಉದ್ಯಾನವನದಲ್ಲಿ ವಿಬಿ ಜಿ ರಾಮ್ ಜಿ ಕಾಯ್ದೆ ವಿರುದ್ಧ ಪ್ರತಿಭಟನೆ ನಡೆಸಿ ರಾಜಭವನ ಚಲೋಗೆ ಮುಂದಾದ ಕಾಂಗ್ರೆಸ್ ನಾಯಕರು ಹಾಗೂ ಕಾರ್ಯಕರ್ತರುಗಳನ್ನು ಪೊಲೀಸರು ವಶಕ್ಕೆ ಪಡೆದು ರಾಜಭವನ ಮುತ್ತಿಗೆಯನ್ನು ವಿಫಲಗೊಳಿಸಿದರು.
ಕಾಂಗ್ರೆಸ್‌ನ ಈ ಪ್ರತಿಭಟನೆ ಹಿನ್ನೆಲೆಯಲ್ಲಿ ಸ್ವತಂತ್ರ ಉದ್ಯಾನವನದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಬಿಗಿ ಪೊಲೀಸ್ ಬಂದೋ ಬಸ್ತ್‌ನ್ನು ನಿಯೋಜಿಸಲಾಗಿತ್ತು.
ಪ್ರತಿಭಟನೆ ಮುಗಿಯುವವರೆಗೂ ಶೇಷಾದ್ರಿರಸ್ತೆಯಲ್ಲಿ ವಾಹನ ಸಂಚಾರವನ್ನು ನಿಷೇಧಿಸಲಾಗಿತ್ತು. ಇದರಿಂದ ಆನಂದರಾವ್ ವೃತ್ತದಿಂದ ಕೆ.ಆರ್. ವೃತ್ತಕ್ಕೆ ತೆರಳುವ ವಾಹನ ಸವಾರರು ತೊಂದರೆಗೆ ಸಿಲುಕಿದರು.ಕಾಂಗ್ರೆಸ್‌ನ ಈ ಪ್ರತಿಭಟನೆಯಲ್ಲಿ ದೊಡ್ಡ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗಿಯಾಗಿದ್ದು, ಬೆಂಗಳೂರಿನ ಎಲ್ಲ ವಿಧಾನಸಭಾ ಕ್ಷೇತ್ರಗಳಿಂದಲೂ ಕಾರ್ಯಕರ್ತರುಗಳು ಪ್ರತಿಭಟನೆಗೆ ಆಗಮಿಸಿದ್ದರು.

# ದೇಶಾದ್ಯಂತ ಬ್ಯಾಂಕ್ ನೌಕರರ ಮುಷ್ಕರ

## 6ವಾರದಲ್ಲಿ ಐದು ದಿನ ಕೆಲಸದ ವ್ಯವಸ್ಥೆ ಜಾರಿಗೊಳಿಸುವಂತೆ ಆಗ್ರಹಿಸಿ ಬ್ಯಾಂಕ್ ನೌಕರರು ಬೆಂಗಳೂರಿನಲ್ಲಿ ಮುಷ್ಕರ ನಡೆಸಿದರು.




**ನವದೆಹಲಿ/ಬೆಂಗಳೂರು, ಜ.27:** ಐದು ದಿನಗಳ ಕೆಲಸದ ವಾರವನ್ನು ತಕ್ಷಣ ಜಾರಿಗೆ ತರುವಂತೆ ಒತ್ತಾಯಿಸಿ ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ (ಯುಎಫ್ ಬಿಯು) ಬೆಂಗಳೂರು ರಾಷ್ಟ್ರವ್ಯಾಪಿ ಮುಷ್ಕರ ನಡೆಸಿದ್ದರಿಂದ ಇಂದು ದೇಶಾದ್ಯಂತ ಸಾರ್ವಜನಿಕ ವಲಯದ ಬ್ಯಾಂಕ್ ಸೇವೆ ಅಸ್ತವ್ಯಸ್ತಗೊಂಡಿತು.

ಬೆಂಗಳೂರಿನಲ್ಲೂ ಸಾರ್ವಜನಿಕ ಕ್ಷೇತ್ರದ ಬ್ಯಾಂಕ್ ಗಳ ನೌಕರರು ಮುಷ್ಕರ ನಡೆಸಿದ್ದರಿಂದ ವಹಿವಾಟಿನಲ್ಲಿ ಸಾಕಷ್ಟು ವ್ಯತ್ಯಯ ಉಂಟಾಗಿದೆ.

ಕಳೆದ ಜನವರಿ 23ರಂದು ಮುಖ್ಯ ಕಾರ್ಮಿಕ ಆಯುಕ್ತರೊಂದಿಗಿನ ಸಂಧಾನ ಸಭೆಯು ಸಕಾರಾತ್ಮಕ ಫಲಿತಾಂಶವನ್ನು ನೀಡಲು ವಿಫಲವಾದ ನಂತರ ಅಧಿಕಾರಿಗಳು ಮತ್ತು ಉದ್ಯೋಗಿಗಳನ್ನು ಪ್ರತಿನಿಧಿಸುವ ಒಂಬತ್ತು ಒಕ್ಕೂಟವಾದ ಯುಎಫ್ ಬಿಯು ಮುಷ್ಕರಕ್ಕೆ ಕರೆ ನೀಡಿದವು. "ಯಾವುದೇ ಸಕಾರಾತ್ಮಕ ಫಲಿತಾಂಶ ಇಲ್ಲದ ಕಾರಣ ಮತ್ತು ಸರ್ಕಾರ ನಮ್ಮ ಬೇಡಿಕೆಯನ್ನು ಒಪ್ಪದ ಕಾರಣ, ಈ ಮುಷ್ಕರವನ್ನು ಕೈಗೊಳ್ಳಲಾಗಿದೆ. ಬ್ಯಾಂಕ್ ನೌಕರರು ಮತ್ತು ಅಧಿಕಾರಿಗಳು ತಾರತಮ್ಯ ಮಾಡಲಾಗುತ್ತಿದೆ ಎಂದು ತೀವ್ರ ದುಃಖಿತರಾಗಿದ್ದಾರೆ" ಎಂದು ಯುಎಫ್ ಬಿಯುನ ಘಟಕವಾದ ಅಖಿಲ ಭಾರತ ಬ್ಯಾಂಕ್ ನೌಕರರ ಸಂಘ ತಿಳಿಸಿದ್ದಾರೆ.

ನೌಕರರು ಮತ್ತು ಅಧಿಕಾರಿಗಳು ಬೀದಿಗಿಳಿದ ಕಾರಣ ದೇಶಾದ್ಯಂತ ಸಾರ್ವಜನಿಕ ವಲಯದ ಬ್ಯಾಂಕುಗಳ ಹೆಚ್ಚಿನ ಶಾಖೆಗಳನ್ನು ಭಾಗಶಃ ಮುಚ್ಚಿದ್ದವು. ನಗದು ಠೇವಣಿಗಳು, ಹಿಂಪಡೆಯುವಿಕೆ, ಚೆಕ್ ಕ್ಲಿಯರೆನ್ಸ್ ಮತ್ತು ಆಡಳಿತಾತ್ಮಕ ಕೆಲಸಗಳಂತಹ ಸೇವೆಗಳು ಎಲ್ಲಾ ಸಾರ್ವಜನಿಕ ವಲಯದ ಬ್ಯಾಂಕುಗಳು ಮತ್ತು ಕೆಲವು ಹಳೆಯ ಖಾಸಗಿ ವಲಯದ ಬ್ಯಾಂಕುಗಳ ಶಾಖೆಗಳಲ್ಲಿ ದೈನಂದಿನ ಕೆಲಸಕ್ಕೆ ಅಡ್ಡಿಯಾಯಿಗಿದೆ.

ಆದಾಗ್ಯೂ, ಎಚ್ ಡಿಎಫ್ ಸಿ ಬ್ಯಾಂಕ್, ಐಸಿಐಸಿಐ ಬ್ಯಾಂಕ್ ಮತ್ತು ಆಕ್ಸಿಸ್ ಬ್ಯಾಂಕ್ ನಂತಹ ಪ್ರಮುಖ ಖಾಸಗಿ ವಲಯದ ಸಾಲದಾತರ ಕಾರ್ಯಾಚರಣೆಗಳು ತಮ್ಮ ಉದ್ಯೋಗಿಗಳು ಮುಷ್ಕರ ನಿರತ ಒಕ್ಕೂಟಗಳ ಭಾಗವಾಗಿಲ್ಲದ ಕಾರಣ ಹೆಚ್ಚಿನ ಪರಿಣಾಮ ಬೀರಿಲ್ಲ ಎಂದು ಹೇಳಿವೆ.

ಯುಪಿಐ ಮತ್ತು ಇಂಟರ್ನೆಟ್ ಬ್ಯಾಂಕಿಂಗ್ ಸೇರಿದಂತೆ ಡಿಜಿಟಲ್ ಬ್ಯಾಂಕಿಂಗ್ ಸೇವೆಗಳು ಕಾರ್ಯನಿರ್ವಹಿಸುತ್ತಲೇ ಇರುತ್ತವೆ. ಆದರೂ ಲಾಜಿಸ್ಟಿಕ್ ವಿಳಂಬದಿಂದಾಗಿ ಎಟಿಎಂ ನಗದು ಲಭ್ಯತೆಯು ಸ್ಥಳೀಯ ಸಮಸ್ಯೆಗಳನ್ನು ಎದುರಾಗಿವೆ.

ವಾರದ ನಾಲ್ಕನೇ ಶನಿವಾರ, ಭಾನುವಾರ ಮತ್ತು ಗಣರಾಜ್ಯೋತ್ಸವದ ಹಿನ್ನೆಲೆಯಲ್ಲಿ ಮೂರು ದಿನ ಬ್ಯಾಂಕಿಗೆ ರಜೆಯಿತ್ತು. ಇಂದು ಬ್ಯಾಂಕ್ ನೌಕರರು ಮುಷ್ಕರ ನಡೆಸಿದ್ದರಿಂದ ಗ್ರಾಹಕರು ಪರದಾಡುವಂತಾಯಿತು.

ಬೆಂಗಳೂರು ನಗರದ ಹಲವು ಎಟಿಎಂಗಳಲ್ಲಿ ಹಣವಿಲ್ಲದೆ ಗ್ರಾಹಕರು ತೊಂದರೆ ಅನುಭವಿಸುವಂತಾಯಿತು.

# ಜನಪ್ರತಿನಿಧಿಗಳ ರಕ್ಷಣೆಗೆ ಸರ್ಕಾರ ಬದ್ಧ

**ಬೆಂಗಳೂರು, ಜ. 27–** ರಾಜ್ಯದಲ್ಲಿ ಜನಪ್ರತಿನಿಧಿಗಳ ರಕ್ಷಣೆಗೆ ಸರ್ಕಾರ ಬದ್ಧವಾಗಿದೆ. ಜನಪ್ರತಿನಿಧಿಗಳಿಗೆ ಯಾವುದೇ ತೊಂದರೆಯಾಗದಂತೆ ರಕ್ಷಣೆ ಒದಗಿಸುತ್ತೇವೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ವಿಧಾನಸಭೆಯಲ್ಲಿಂದು ಹೇಳಿದರು.

ಪ್ರಶ್ನೋತ್ತರ ಅವಧಿಯಲ್ಲಿ ಜೆಡಿಎಸ್‌ನ ಕರೆಮ್ಮಾ ಅವರು ಅಕ್ರಮ ಮರಳುಗಾರಿಕೆ ದಂಧೆಗೆ ಕಡಿವಾಣ ಹಾಕಲು ಮುಂದಾದ ತಮಗೆ ಬೆದರಿಕೆ ಹಾಕಲಾಗಿದೆ.

ತಮ್ಮ ಮನೆಗೆ ನುಗ್ಗಿ ಗುಂಡಾಗಿರಿ ಮಾಡಿದ್ದಾರೆ. ನಮಗೆ ರಕ್ಷಣೆ ಇಲ್ಲದಾಗಿದೆ ಎಂದು ಸದನದಲ್ಲಿ ರಾಯಚೂರಿನ ದೇವದುರ್ಗ ತಾಲ್ಲೂಕಿನಲ್ಲಿ ನಡೆದ ಅಕ್ರಮ ಮಟ್ಕಾ, ಇಸ್ಪೀಟ್ ದಂಧೆ ಬಗ್ಗೆ ಸದನದಲ್ಲಿ ಸವಿಸ್ತಾರವಾಗಿ ಹೇಳಿ, ಜನಪ್ರತಿನಿಧಿಗಳ ರಕ್ಷಣೆಗೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ ಸಂದರ್ಭದಲ್ಲಿ ಜೆಡಿಎಸ್‌ನ ಸುರೇಶ್‌ಬಾಬು ಸೇರಿದಂತೆ ಹಲವು ಸದಸ್ಯರು ಕರೆಮ್ಮಾ ಅವರ ಬೆಂಬಲಕ್ಕೆ ನಿಂತು ಅವರ ರಕ್ಷಣೆಗೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದರು.

ಆಗ ಎದ್ದು ನಿಂತು ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಜನಪ್ರತಿನಿಧಿ ಕರೆಮ್ಮಾ ಸೇರಿದಂತೆ ಎಲ್ಲ ಜನಪ್ರತಿನಿಧಿಗಳಿಗೆ ರಕ್ಷಣೆ ನೀಡುವುದು ನಮ್ಮ ಕರ್ತವ್ಯ. ಅವರ ರಕ್ಷಣೆಗೆ ಕ್ರಮ ಕೈಗೊಳ್ಳುವಂತೆ ಸೂಚನೆ ಕೊಡುತ್ತೇನೆ. ಒಂದು ವೇಳೆ ಜನಪ್ರತಿನಿಧಿಗಳಿಗೆ ರಕ್ಷಣೆ ಕೊಡದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಹೇಳಿದರು.

ಆಗ ಸಭಾಧ್ಯಕ್ಷ ಯು.ಟಿ.ಖಾದರ್, ಯಾವುದೇ ಶಾಸಕರ ರಕ್ಷಣೆಯಲ್ಲಿ ಲೋಪವಾದರೆ ಅದಕ್ಕೆ ಸಂಬಂಧಿಸಿದಂತಹ ಇನ್ಸ್‌ಪೆಕ್ಟರ್‌ನ್ ಹೊಣೆ ಮಾಡಿ ಎಂದು ಸೂಚಿಸಿದರು.

ಸಭಾಧ್ಯಕ್ಷರ ಮಾತನ್ನು ಒಪ್ಪಿದ ಸಚಿವ ಡಾ.ಜಿ. ಪರಮೇಶ್ವರ್, ಎಲ್ಲ ಶಾಸಕರ ರಕ್ಷಣೆಗೆ ನಾವು ಬದ್ಧ ಎಂದು ಹೇಳಿದರು.

ದೇವದುರ್ಗ ತಾಲ್ಲೂಕಿನಲ್ಲಿ ಅಷ್ಟೆ ಅಲ್ಲ ರಾಜ್ಯದ ಹಲವೆಡೆ



ಮರಳು ದಂಧೆ ನಡೆದಿದೆ. ಈ ಮರಳು ಗಣಿಗಾರಿಕೆ ಗಣಿ ಇಲಾಖೆ ವ್ಯಾಪ್ತಿಗೆ ಬರುತ್ತದೆ. ನಾವು ಅಕ್ರಮಗಳಾಗಿದ್ದರೆ ಮಾತ್ರ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿ, ದೇವದುರ್ಗ ತಾಲ್ಲೂಕಿನಲ್ಲಿ ಅಕ್ರಮ ಮರಳು ಗಣಿಗಾರಿಕೆ ತಡೆಯಲು ಸ್ಯಾಂಡ್ ಟಾಸ್ಕ್ ಫೋರ್ಸ್ ಮಾಡಿದ್ದೇವೆ. ಹಲವರನ್ನು ಗಡಿಪಾರು ಮಾಡಿದ್ದೇವೆ. ಮಟ್ಕಾ, ಜೂಜು, ಇಸ್ಪೀಟು ಸೇರಿದಂತೆ ಹಲವು ಪ್ರಕರಣಗಳನ್ನುದಾಖಲಿಸಲಾಗಿದೆ.

ಪೊಲೀಸರು ಅಕ್ರಮಗಳನ್ನು ತಡೆಯಲು ಕೆಲಸ ಮಾಡುತ್ತಿದ್ದಾರೆ. ಅದು ಸಾಲದು ನಿಜ ಮತ್ತಷ್ಟು ಕಠಿಣ ಕ್ರಮಗಳನ್ನು ಕೈಗೊಳ್ಳುತ್ತೇವೆ ಎಂದು ಹೇಳಿದರು.

ಅಕ್ರಮ ಮರಳುಗಾರಿಕೆ ಹಿಂದೆ ದೊಡ್ಡ ದೊಡ್ಡವರಿದ್ದಾರೆ. ಎಲ್ಲ ಪಕ್ಷದವರೂ ಇದ್ದಾರೆ. ಯಾರೇ ಇರಲಿ ಕಾನೂನಿಗಿಂತ ದೊಡ್ಡವರು ಯಾರೂ ಇಲ್ಲ ಯಾರೇ ಆದರೂ ಅವರ ವಿರುದ್ಧ ಕ್ರಮ ಕೈಗೊಳ್ಳುತ್ತವೆ ಎಂದರು.

ಈ ಮಧ್ಯ ಮತ್ತೆ ಮಾತನಾಡಿದ ಕರೆಮ್ಮಾ, ಅಲ್ಲಿ ಪೊಲೀಸರು ಏನೂ ಮಾಡುತ್ತಿಲ್ಲ. ಯಾವ ವಿಶೇಷ ಪಡೆಯೂ ಕೆಲಸ ಮಾಡುತ್ತಿಲ್ಲ. ಶಾಸಕರಾಗಿ ನಾನು ಕೆಲಸ ಮಾಡುವುದು ಕಷ್ಟವಾಗಿದೆ. ಅಕ್ರಮಗಳಿಗೆ ತಡೆ ಹಾಕಿ ಎಂದು ಒತ್ತಾಯಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಸಿರವಾರ ಪಟ್ಟಣದಲ್ಲಿ ಬೀಡಾಡಿ ದನಗಳ ಅಟ್ಟಹಾಸ: ವಾಹನ ಸವಾರರ ಪ್ರಾಣಕ್ಕೆ ಸಂಚಕಾರ!

ಯುವಮಾರ್ಗ ಸುದ್ದಿ



**ಸಿರವಾರ,ಜ.27–** ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಬೀಡಾಡಿ ದನಗಳ ಹಾವಳಿ ಮಿತಿಮೀರಿದ್ದು, ವಾಹನ ಸವಾರರು ಹಾಗೂ ಸಾರ್ವಜನಿಕರು ಜೀವ ಕೈಯಲ್ಲಿ ಹಿಡಿದು ಓಡಾಡುವಂತಾಗಿದೆ. ರಸ್ತೆ ಮಧ್ಯದಲ್ಲೇ ದನಗಳು ಠಿಕಾಣಿ ಹೂಡುತ್ತಿರುವುದರಿಂದ ಸಂಚಾರ ದಟ್ಟಣೆ ಉಂಟಾಗುತ್ತಿದ್ದು, ಅಪಘಾತಗಳ ಸಂಖ್ಯೆಯೂ ಏರಿಕೆಯಾಗುತ್ತಿದೆ.

**ರಸ್ತೆಯೇ ಗೋಶಾಲೆ:** ಸಿರವಾರದ ಮುಖ್ಯ ರಸ್ತೆ, ಬಸ್ ನಿಲ್ದಾಣದ ರಸ್ತೆ ಹಾಗೂ ಮಾರುಕಟ್ಟೆ ಪ್ರದೇಶಗಳಲ್ಲಿ ದನಗಳು ಹಿಂಡು ಹಿಂಡಾಗಿ ನಿಲ್ಲುತ್ತಿವೆ. ಇದರಿಂದಾಗಿ ದ್ವಿಚಕ್ರ ಹಾಗೂ ನಾಲ್ಕು ಚಕ್ರದ ವಾಹನ ಸವಾರರು ಸಾಗಲು ಜಾಗವಿಲ್ಲದಂತಾಗಿದೆ. ರಾತ್ರಿಯ ವೇಳೆಯಂತೂ ರಸ್ತೆ ಮಧ್ಯೆ ಕುಳಿತಿರುವ ದನಗಳು ಕಣ್ಣಿಗೆ ಕಾಣದೆ ಸವಾರರು ಬಿದ್ದು ಗಾಯಗೊಂಡಿರುವ ನಿದರ್ಶನಗಳು ಸಾಕಷ್ಟಿವೆ.

**ವಾಹನ ಸವಾರರ ಆಕ್ರೋಶ:** ಕೆಲಸದ ಅವಸರದಲ್ಲಿ ಹೋಗುವಾಗ ದನಗಳು ಅಡ್ಡ ಬಂದು ಸಡನ್ ಬ್ರೇಕ್ ಹಾಕಬೇಕಾಗುತ್ತದೆ. ಇದರಿಂದ ಹಿಂದಿನಿಂದ ಬರುವ ವಾಹನಗಳು ಡಿಕ್ಕಿಯಾಗುವ ಸಂಭವವಿರುತ್ತದೆ. ಪಟ್ಟಣ ಪಂಚಾಯತ್ ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು" ಎಂದು ಸ್ಥಳೀಯ ವಾಹನ ಸವಾರರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಸಂಚಾರಕ್ಕೆ ಅಡ್ಡಿ:** ಮಾರುಕಟ್ಟೆ ದಾರಿಯಲ್ಲಿ ದನಗಳ ಕಾಟದಿಂದಾಗಿ ಗಂಟೆಗಟ್ಟಲೆ ಟ್ರಾಫಿಕ್ ಜಾಮ್ ಉಂಟಾಗುತ್ತಿದೆ.

**ಅಪಘಾತಗಳ ಭೀತಿ:** ದನಗಳ ನಡುವಿನ ಕಾದಾಟದಿಂದ ಪಾದಚಾರಿಗಳು ಮತ್ತು ಶಾಲಾ ಮಕ್ಕಳಿಗೆ ಏಟು ಬೀಳುವ ಅಪಾಯವಿದೆ.

**ನಿರ್ಲಕ್ಷ್ಯದ ಆರೋಪ:** ದನಗಳ ಮಾಲೀಕರಿಗೆ ದಂಡ ಹಾಕದೆ ಅಥವಾ ದನಗಳನ್ನು ದೊಡ್ಡಿಗೆ ಹಾಕದೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಸಾರ್ವಜನಿಕರು ದೂರುತ್ತಿದ್ದಾರೆ.

**ಸಾರ್ವಜನಿಕರ ಆಗ್ರಹ:** ಪಟ್ಟಣ ಪಂಚಾಯತ್ ನೂತನ ಅಧ್ಯಕ್ಷರು ಹಾಗೂ ಅಧಿಕಾರಿಗಳು ಕೂಡಲೇ ಈ ಬಗ್ಗೆ ಗಮನ ಹರಿಸಬೇಕು. ರಸ್ತೆಯಲ್ಲಿ ತಿರುಗಾಡುವ ದನಗಳನ್ನು ಮಾಲೀಕರು ತಮ್ಮ ಮನೆಯಲ್ಲಿ ಕಟ್ಟಿ ಹಾಕುವಂತೆ ಸೂಚಿಸಬೇಕು ಅಥವಾ ಪಟ್ಟಣ ಪಂಚಾಯತ್ ವತಿಯಿಂದ ಸೂಕ್ತ ಜಾಗಕ್ಕೆ ಸ್ಥಳಾಂತರಿಸಬೇಕು ಎಂದು ಸಿರವಾರದ ಜನತೆ ಒತ್ತಾಯಿಸಿದ್ದಾರೆ.

# ಗಣರಾಜ್ಯೋತ್ಸವ; ಗಾಂಧೀಜಿ ಪುತ್ಥಳಿ ಮುಂದೆ ಸರ್ವಧರ್ಮ ಪ್ರಾರ್ಥನೆ



ಯುವಮಾರ್ಗ ಸುದ್ದಿ

**ರಾಯಚೂರು,ಜ.27–** ಗಣರಾಜ್ಯೋತ್ಸವದ ಅಂಗವಾಗಿ ನಗರದ ಮಹಾತ್ಮ ಗಾಂಧೀಜಿ ಪುತ್ಥಳಿಯ ಮುಂಭಾಗದಲ್ಲಿ ಸರ್ವಧರ್ಮ ಪ್ರಾರ್ಥನಾ ಕಾರ್ಯಕ್ರಮವು ಜನವರಿ 26ರಂದು ನಡೆಯಿತು.

ಈ ವೇಳೆ ಲಕ್ಷ್ಮೀದೇವಿ, ಸುನೀತಾ, ನಾಗಶ್ರೀ, ಸೈಯದ್ ಇಸ್ಮಾಯಿಲ್ ಖಾದ್ರಿ, ವಿದ್ಯಾಸಾಗರ್ ಅವರು ಸರ್ವಧರ್ಮ ಪ್ರಾರ್ಥನೆಯಲ್ಲಿ ಭಾಗಿಯಾಗಿ ವಿವಿಧ ಧರ್ಮಗಳಲ್ಲಿನ ಅಂಶಗಳ ಕುರಿತು ಪ್ರಸ್ತುತಪಡಿಸಿದರು. ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಹಾತ್ಮಾ ಗಾಂಧೀಜಿ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಾಡಿ, ಪ್ರಜಾಪ್ರಭುತ್ವದ ಮಹತ್ವ ತಿಳಿಸುವ ಭಾರತದ ಲಿಖಿತ ಸಂವಿಧಾನದ ಬಗ್ಗೆ ಪ್ರತಿಯೊಬ್ಬರು ಅರಿಯಬೇಕು. ಯುವಕರು, ವಿದ್ಯಾರ್ಥಿಗಳು ಸಂವಿಧಾನದ ಮಹತ್ವವನ್ನು ತಿಳಿದು ಕೊಳ್ಳಬೇಕು. ಕಾನೂನಿನಡಿಯಲ್ಲಿ ನಾವೆಲ್ಲರೂ ಕಾರ್ಯ ನಿರ್ವಹಿಸಬೇಕೆಂದರು.

ರಾಯಚೂರು ನಗರಸಭೆಯು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿ ವರ್ಷದೊಳಗೆ ಪಾಲಿಕೆಯ ಆಡಳಿತವನ್ನು ಬಲಪಡಿಸುವಲ್ಲಿ ನಾವು ನಾನಾ ಕ್ರಮಗಳನ್ನು ತೆಗೆದುಕೊಂಡಿದ್ದೇವೆ. ಇದಕ್ಕೆ ರಾಯಚೂರಿನ ಮಹಾನಗರ ಪಾಲಿಕೆಯ ಎಲ್ಲ ಸದಸ್ಯರು ಮತ್ತು ಮಾಧ್ಯಮದವರು ನೀಡಿದ ಸಹಕಾರ ಸ್ಮರಣೀಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಪಾಲಿಕೆಯ ಜೋನಲ್ ಆಯುಕ್ತರಾದ ಪುರುರಾಜ್ ಸಿಂಗ್ ಸೋಲಂಕಿ, ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಮಹಾನಗರ ಪಾಲಿಕೆಯ ಕಾರ್ಯನಿರ್ವಾಹಕ ಅಭಿಯಂತರಾದ ಬಸವರಾಜ್ ಹೆಬ್ಬಾರ್, ಪರಿಸರ ಅಭಿಯಂತರರಾದ ಜಯಪಾಲ್ ರೆಡ್ಡಿ, ಎನ್.ವಿ.ಡಿ ಸ್ಪರ್ಧಾ ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ, ಭಾರತ ಸೇವಾದೇಳದ ವಿದ್ಯಾಸಾಗರ್, ಭರತ್, ಶರಣಪ್ಪ ಸೇರಿದಂತೆ ಇತರರು ಇದ್ದರು.

# ಭಾರತ–ಯುರೋಪ್ ಒಕ್ಕೂಟ ವ್ಯಾಪಾರ ಎಲ್ಲಾ ಒಪ್ಪಂದಗಳ ತಾಯಿ: ಮೋದಿ

**ನವದೆಹಲಿ,ಜ.27–** ಭಾರತ–ಯುರೋಪ್ ಒಕ್ಕೂಟದ ನಡುವಿನ ಮುಕ್ತ ವ್ಯಾಪಾರ ಒಪ್ಪಂದವನ್ನು ಇಡೀ ಜಗತ್ತು'ಎಲ್ಲಾ ಒಪ್ಪಂದಗಳ ತಾಯಿ' ಎಂದು ಕರೆಯುತ್ತಿದೆ. ಇದರಿಂದ ದೇಶದ ಉತ್ಪಾದನಾ ವಲಯದಲ್ಲಿ ಮತ್ತಷ್ಟು ಅವಕಾಶ ಸೃಷ್ಟಿ ಮಾಡಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದಿಲ್ಲಿ ಹೇಳಿದ್ದಾರೆ

ಭಾರತ–ಯುರೋಪಿಯನ್ ಒಕ್ಕೂಟದ ನಡುವೆ ಮುಕ್ತ ವ್ಯಾಪಾರ ಒಪ್ಪಂದ ಎರಡೂ ಕಡೆ ಕಾನೂನನ್ನು ಮತ್ತಷ್ಟು ಬಲಪಡಿಸಲು ಸಹಕಾರಿಯಾಗಲಿದೆ ಜೊತೆಗೆ ವ್ಯಾಪಾರ ಒಪ್ಪಂದದಿಂದ ಹಲವರಿಗೆ ಅವಕಾಶ ಸೃಷ್ಟಿಸುವ ಮೂಲಕ ಭಾರತದ ಉತ್ಪಾದನಾ ವಲಯವನ್ನು ಉತ್ತೇಜಿಸುತ್ತದೆ ಎಂದು ಹೇಳಿದ್ದಾರೆ

ಹೆಚ್ಚುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಮತ್ತು ವಿಶೇಷವಾಗಿ ಅಮೆರಿಕ ಬಹು ರಾಷ್ಟ್ರಗಳ ಮೇಲೆ ಸುಂಕ ಘೋಷಣೆಯ ಮಧ್ಯೆ ಯುರೋಪಿಯನ್ ಒಕ್ಕೂಟದ ಜೊತೆ ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಂಡಿರುವುದಾಗಿ ಪ್ರಧಾನಿ ಹೇಳಿಕೆ ಮಹತ್ವ ಪಡೆದುಕೊಂಡಿದೆ

ಈ ಕುರಿತು ಪ್ರತಿಕ್ರಿಯಿಸಿರುವ ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ಯುರೋಪಿಯನ್ ಒಕ್ಕೂಟ ವ್ಯಾಪಾರ ಒಪ್ಪಂದ ಭೌಗೋಳಿಕ ರಾಜಕೀಯ ಜಗಳಗಳ ನಡುವೆಯೂ ಭಾರತ–ಯುರೋಪ್ ಒಕ್ಕೂಟದ ಮುಕ್ತ ವ್ಯಾಪಾರ ಕಾನೂನಿನ ನಿಯಮವನ್ನು ಖಚಿತಪಡಿಸುತ್ತದೆ ಎಂದು ತಿಳಿಸಿದ್ದಾರೆ

ಭಾರತ– ಯುರೋಪಿಯನ್ ವ್ಯಾಪಾರ ಒಪ್ಪಂದದ ಸುಮಾರು ಎರಡು ದಶಕಗಳ ಮಾತುಕತೆಗಳ ನಂತರ, ಭಾರತ ಮತ್ತು ಯುರೋಪಿಯನ್



ಒಕ್ಕೂಟದ ಒಪ್ಪಂದ . ಘೋಷಿಸಲು ಸಿದ್ಧವಾಗಿವೆ ಎಂದು ತಿಳಿಸಿದ್ದಾರೆ

ಭಾರತ–ಯುರೋಪ್ ಒಕ್ಕೂಟದ ನಡುವಿನ ಬಾಕಿ ಇರುವ ವ್ಯಾಪಾರ ಒಪ್ಪಂದವನ್ನು ಈಗಾಗಲೇ ಪ್ರಪಂಚದಾದ್ಯಂತ ಜನರು "ಎಲ್ಲಾ ಒಪ್ಪಂದಗಳ ತಾಯಿ" ಎಂದು ಪ್ರಶಂಸಿಸುತ್ತಿದ್ದಾರೆ ಎಂದು ಹೇಳಿದ್ದಾರೆ

500 ಯುರೋ ಬೆಂಬಲ–ಮಾಲಿನ್ಯ ಕಡಿಮೆ ಮಾಡುವ ನಿಟ್ಟಿನಲ್ಲಿ ಭಾರತದ ಪ್ರಯತ್ನಗಳನ್ನು ಬೆಂಬಲಿಸಲು ಯುರೋಪಿಯನ್ ಯೂಜಿಯನ್ 500 ಮಿಲಿಯನ್ ಯುರೋಗಳನ್ನು ಒದಗಿಸಲು ಮುಂದಾಗಿದೆ.ಭಾರತ  ಯುರೋಪಿಯನ್ ವ್ಯಾಪಾರ ಒಪ್ಪಂದದ ಸುಮಾರು ಎರಡು ದಶಕಗಳ ಮಾತುಕತೆಗಳ ನಂತರ, ನಡೆದಿದ್ದು ಮಹತ್ವ ಪಡೆದುಕೊಂಡಿದೆ

ಒಪ್ಪಂದಕ್ಕೆ ಅಮೇರಿಕಾ ಟೀಕೆ–ಭಾರತದೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದ್ದಕ್ಕಾಗಿ ಯುರೋಪಿಯನ್ ಒಕ್ಕೂಟವನ್ನು ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಟೀಕಿಸಿದ್ದಾರೆ "ರಷ್ಯಾದ ತೈಲವನ್ನು ಖರೀದಿಸಲು ಭಾರತದ ಮೇಲೆ ಶೇಕಡಾ 25 ರಷ್ಟು ಸುಂಕವನ್ನು ವಿಧಿಸಿದ್ದೇವೆ" ಎಂದು ಹೇಳಿದ್ದಾರೆ.

ಯುರೋಪಿಯನ್ನರು ಭಾರತದೊಂದಿಗೆ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಿರುವುದು ಯುರೋಪಿಯನ್ ಒಕ್ಕೂಟ ಜೊತೆಗೆ ಭಾರತದ ಮೇಲೆ ಇನ್ನಷ್ಟು ಸುಂಕ ವಿಧಿಸಲು ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ

ಸಂಚಾರ ನಿರ್ಬಂಧ–ಯೂರೋಪ್ ಒಕ್ಕೂಟದ ನಾಯಕರು ರಾಜ್‌ಘಾಟ್‌ಗೆ ಭೇಟಿ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ಸಂಚಾರ ನಿರ್ಬಂಧಿಸಲಾಗಿದೆ ಎಂದು ದೆಹಲಿ ಪೊಲೀಸರು ತಿಳಿಸಿದ್ದಾರೆ.ಯುರೋಪಿಯನ್ ಒಕ್ಕೂಟದ ನಾಯಕರು ರಾಜ್‌ಘಾಟ್‌ನಲ್ಲಿರುವ ಮಹಾತ್ಮ ಗಾಂಧಿಯವರ ಸ್ಮಾರಕಕ್ಕೆ ಭೇಟಿ ನೀಡಿ ಗೌರವ ಸಲ್ಲಿಸಿದರು. ಈ ಹಿನ್ನೆಲೆಯಲ್ಲಿ ರಾಜ್‌ಘಾಟ್ ಮತ್ತು ರಾಷ್ಟ್ರ ರಾಜಧಾನಿಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೆಲವು ಗಂಟೆಗಳ ಕಾಲ ಸಂಚಾರ ನಿರ್ಬಂಧಿಸಲಾಗಿತ್ತು

ಸುಗಮ ಸಂಚಾರವನ್ನು ಖಚಿತಪಡಿಸಿಕೊಳ್ಳಲು ವಿಶೇಷ ಸಂಚಾರ ವ್ಯವಸ್ಥೆಗಳನ್ನು ಜಾರಿಗೆ ತರಲಾಗುವುದು ಎಂದು ದೆಹಲಿ ಪೊಲೀಸರು ಹೇಳಿದ್ದಾರೆ

# ಮಾನವಿಯಲ್ಲಿ ಕೈಗಾರಿಕೆ ವಾಣಿಜ್ಯ ಇಲಾಖೆಯಿಂದ ಕಾರ್ಯಗಾರ

**ರಾಯಚೂರು,ಜ.27–**ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ 2025–26ನೇ ಸಾಲಿನ ರಾಂಪ್ ಯೋಜನೆಯಡಿಯಲ್ಲಿ ಪಿರಿಯಾಡಿಕ್ ಮೀಟ್ಸ್ ಅಂಡ್ ನಾಲೆಜ್ ಟ್ರಾನ್ಸರ್ ಸೆಷನ್ಸ್ ವಿಥ್ ಬಿಡಿಎಸ್‌ಪಿ ಯೋಜನೆಯ ಕುರಿತು ಕೆಎಸ್‌ಎಮ್‌ಸಿ& ಎ ಬೆಂಗಳೂರು ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ಕೈಗಾರಿಕೋದ್ಯಮಿಗಳಿಗೆ ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮವು ಜನವರಿ 29ರ ಬೆಳಿಗ್ಗೆ 10.30ಕ್ಕೆ ಜಿಲ್ಲೆಯ ಮಾನ್ವಿಯ ಎಪಿಎಂಸಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಮಾನವಿ ತಾಲ್ಲೂಕು ಹಾಗೂ ಸುತ್ತಲಿನ ಕೈಗಾರಿಕಾ ಘಟಕಗಳ ಮುಖ್ಯಸ್ಥರು, ಉದ್ದಿಮೆದಾರರು ಈ ಕಾರ್ಯಾಗಾರದಲ್ಲಿ ಸದುಪಯೋಗಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರಾದ ಲಕ್ಷ್ಮೀಕಾಂತ ಕುಲಕರ್ಣಿ ಅವರು ಮೊಬೈಲ್ ಸಂಖ್ಯೆ: 8861241093ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆಬ್ರವರಿ 06ರಂದು ಜಿಲ್ಲಾ ಮಟ್ಟದ ಉದ್ಯೋಗ ಮೇಳ

**ರಾಯಚೂರು,ಜ.27–**ಇಲ್ಲಿನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಸಂಜೀವಿನಿ–ಕೆಎಸ್‌ಆರ್‌ಎಲ್‌ಎಸ್ ಬೆಂಗಳೂರು, ಜಿಲ್ಲಾ ಪಂಚಾಯತ್, ಜಿಲ್ಲಾ ಕೌಶಲ್ಯ ಮಿಷನ್ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಡಿಡಿಯು–ಜಿ.ಕೆವೈ ಯೋಜನೆಯಡಿಯಲ್ಲಿ ಜಿಲ್ಲಾ ಮಟ್ಟದ ಉದ್ಯೋಗ ಮೇಳವನ್ನು ಫೆಬ್ರವರಿ 06ರಂದು ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಪ್ರೇಕ್ಷಾಗೃಹ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ವಿದ್ಯಾವಂತ ಯುವಕ–ಯುವತಿಯರು ಈ ಸದಾವಕಾಶವನ್ನು ಪಡೆಯುವಂತೆ ಕೋರಲಾಗಿದೆ.

ಈ ಉದ್ಯೋಗ ಮೇಳದಲ್ಲಿ ರಾಜ್ಯದ ವಿವಿಧ ಭಾಗಗಳಿಂದ ಮತ್ತು ಸ್ಥಳೀಯವಾಗಿ ಅಂದಾಜು 75ಕ್ಕೂ ಹೆಚ್ಚಿನ ಪ್ರತಿಷ್ಠಿತ ಬೃಹತ್, ಮಧ್ಯಮ, ಸಣ್ಣ ಉದ್ಯೋಗದಾತ ಕಂಪನಿಗಳು ಭಾಗವಹಿಸುತ್ತಿದ್ದು, ಜಿಲ್ಲೆಯ ವಿದ್ಯಾವಂತ ಯುವಕ/ ಯುವತಿಯರಿಗೆ ಪ್ರತಿಷ್ಠಿತ ಖಾಸಗಿ ವಲಯದಲ್ಲಿ ಉದ್ಯೋಗವನ್ನು ಕಲ್ಪಿಸುವುದು ಉದ್ಯೋಗ ಮೇಳದ ಮುಖ್ಯ ಉದ್ದೇಶವಾಗಿದೆ.

ಈ ಉದ್ಯೋಗ ಮೇಳವು ಉದ್ಯೋಗದಾತರ ಸಂಸ್ಥೆಗಳಲ್ಲಿ ಖಾಲಿ ಇರುವ ವಿವಿಧ ಉದ್ಯೋಗಗಳಿಗೆ ಅರ್ಹ ಉದ್ಯೋಗಾಕಾಂಕ್ಷಿಗಳನ್ನು ಆಯ್ಕೆ ಮಾಡಿಕೊಳ್ಳಲಿದ್ದಾರೆ. ಮತ್ತು ಉದ್ಯೋಗಾಕಾಂಕ್ಷಿ ಯುವಕ/ ಯುವತಿಯರು ತಮ್ಮ ಕೌಶಲ್ಯಕ್ಕೆ ಅನುಗುಣವಾಗಿ ಉದ್ಯೋಗವನ್ನು ಆಯ್ಕೆಮಾಡಿಕೊಳ್ಳಲು ಅವಕಾಶವಿರುತ್ತದೆ.

ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಉದ್ಯೋಗಾಕಾಂಕ್ಷಿಗಳು (ಎಂಥ ಖಜಜಇ–ಜಥಿ) ಜಾಲತಾಣ: ತಿತಿತಿ.ಡಿಚುಚ್ಥಿಣಡಿಣಜಥಿಂರಂಟಜಟಚಿ.ಛಿಂಟ ಗೆ ಭೇಟಿ ನೀಡಿ ಆನ್‌ಲೈನ್ ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ. ಅಥವಾ ಕ್ಯೂ ಆರ್ ಕೋಡ್ ಸ್ಕಾ??ನ್ ಮೂಲಕ ಉಚಿತವಾಗಿ ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಧನಂಜಯ ಮೂರ್ತಿ ಮೊಬೈಲ್ ಸಂಖ್ಯೆ: 9538753304, ಮಂಜುನಾಥ ಮೊಬೈಲ್ ಸಂಖ್ಯೆ: 7975618955, ಮಹಾದೇವ ಮೊಬೈಲ್ ಸಂಖ್ಯೆ: 7676999304 ಹಾಗೂ ಪ್ರಕಾಶ ಮೊಬೈಲ್ ಸಂಖ್ಯೆ: 9845339241ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊರ್ವಿಹಾಳ ಗ್ರಾಮದ ನಿವಾಸಿ ಸ್ವಾಮಿ ಕಾಣೆ: ಪತ್ತೆಗೆ ಮನವಿ

ಯುವಮಾರ್ಗ ಸುದ್ದಿ

**ರಾಯಚೂರು,ಜ.27–**ಇಲ್ಲಿನ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಕೊರ್ವಿಹಾಳ ಗ್ರಾಮದ ನಿವಾಸಿ ಸ್ವಾಮಿ ತಂದೆ ರಾಮಪ್ಪ (38) ಎಂಬ ಕಾಣೆಯಾದ ಬಗ್ಗೆ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ: 230/2025 ಕಲಂ ಮನುಷ್ಯ ಕಾಣೆರಡಿ ಪ್ರಕರಣ ದಾಖಲಾಗಿದೆ.

ಈತನು ದಿನಾಂಕ: 05–12–2025ರ ರಾತ್ರಿ 8 ಗಂಟೆ ಸುಮಾರಿಗೆ ಗುಂಜಳ್ಳಿಯಲ್ಲಿ ಉರುಸು ಕಾರ್ಯಕ್ರಮ ಮುಗಿಸಿಕೊಂಡು ಕೊರ್ವಿಹಾಳ ಗ್ರಾಮದ ತಮ್ಮ ಮನೆಗೆ ಹೋಗಿ, ಮನೆಯಲ್ಲಿ ತನ್ನ ತಾಯಿಗೆ ಹೊರಗಡೆ ಹೋಗಿ ಬರುತ್ತೇನೆಂದು ಹೇಳಿ ಹೋದವನು ಮರಳಿ ಮನೆಗೆ ಬಾರದೇ ಕಾಣೆಯಾಗಿದ್ದಾನೆ.

ಚಹರೆ: ವಯಸ್ಸು 38 ವರ್ಷ, ಉದ್ಯೋಗ ಟ್ರ್ಯಾಕ್ಟರ್ ಚಾಲಕ. ಸಾಧಾರಣ ಮೈಕಟ್ಟು, ಗೋಧಿ ಮೈ ಬಣ್ಣ, ಚಪ್ಪಟೆ ಮುಖ, ಕಪ್ಪು ಕೂದಲು, ನೀಲಿ ಬಣ್ಣದ ಅಂಗಿ, ನೀಲಿ ಬಣ್ಣದ ಪ್ಯಾಂಟ್ ಬಟ್ಟೆಯನ್ನು ಧರಿಸಿರುತ್ತಾನೆ.

ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತಾಡುತ್ತಾನೆ. ಈ ಕಾಣೆಯಾದ ಯುವಕನ ಬಗ್ಗೆ



ಮಾಹಿತಿ ಸಿಕ್ಕಲ್ಲಿ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್‌ಐ 9480803850, ಸಿಪಿಐ ಗ್ರಾಮೀಣ ವೃತ್ತ ರಾಯಚೂರು: 9480803832, ಡಿವೈಎಸ್ಪಿ ರಾಯಚೂರು 9480803820, ರಾಯಚೂರು ಕಂಟ್ರೋಲ್ ರೂಮ್ ದೂರವಾಣಿ ಸಂಖ್ಯೆ: 08532–235635ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H